ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆ
JANASHREE TIMES KANNADA DAILY NEWS PAPER
PRGI NO : KNKAN/26/A0482

ಜನಶ್ರೀವಾಣಿ
ಆ ತತ್ವ ಈ ತತ್ವ ಎನ್ನುವುದಕ್ಕಿಂತ ಸತ್ವ ಇರುವ ಮನುಷ್ಯತ್ವವೇ ಮೇಲು.
■ ಆನಂದಯ್ಯ ವಿರಕ್ತಮಠ

ಸಂಪಾದಕರು: ಆನಂದಯ್ಯ ವಿರಕ್ತಮಠ | ಸಂಪುಟ: 01 ಸಂಚಿಕೆ: 09 ಪುಟಗಳು: 04 ಬೆಲೆ: 02 ರೂ. ದಿನಾಂಕ: 13-06-2026 ಶನಿವಾರ | 73536 56555

# ವಸತಿ ರಹಿತರ ಸಮೀಕ್ಷೆ ಪಟ್ಟಿ ಪರಿಷ್ಕರಣೆ : ಅವಧಿ ವಿಸ್ತರಣೆ

ವಿಜಯನಗರ: 2018ರ ವಸತಿ ಮತ್ತು ನಿವೇಶನ ರಹಿತರ ಸಮೀಕ್ಷೆಯ ಪಟ್ಟಿಯಲ್ಲಿ ಬಿಟ್ಟು ಹೋಗಿರುವ ಅರ್ಹ ಫಲಾನುಭವಿಗಳನ್ನು ಸೇರ್ಪಡೆಗೊಳಿಸಲು ಹಾಗೂ ಪಟ್ಟಿಯನ್ನು ಪರಿಷ್ಕರಿಸಲು ಜೂನ್ 30ರವರೆಗೆ ಅವಧಿ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೋಂಗ್ಜಾಯ್ ಮೊಹಮ್ಮದ್ ಅಲಿ ಅಕ್ರಂ ಷಾ ತಿಳಿಸಿದ್ದಾರೆ.

ರಾಜೀವ್ ಗಾಂಧಿ ವಸತಿ ನಿಗಮದ ಸೂಚನೆಯಂತೆ ಈ ಪ್ರಕ್ರಿಯೆಯನ್ನು ಅತ್ಯಂತ ತುರ್ತು ಎಂದು ಭಾವಿಸಿ, ಆಂದೋಲನದ ಮಾದರಿಯಲ್ಲಿ ಕೈಗೆತ್ತಿಕೊಳ್ಳುವಂತೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪಟ್ಟಿಯಲ್ಲಿರುವ ಅನರ್ಹರನ್ನು ಸೂಕ್ತ ಕಾರಣಗಳೊಂದಿಗೆ 'ಖಟಿ-ಇಟುರುಭಟಜ' ಎಂದು ಗುರುತಿಸಿ ಪಟ್ಟಿಯಿಂದ ತೆಗೆದುಹಾಕುವುದು. ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಅಡಿ ಈಗಾಗಲೇ ಮನೆ ಪಡೆದವರ ವಸತಿ ವರ್ಷ ಮತ್ತು ಐಓ-ನಂಬರ್ ಮಾತ್ರ ನಮೂದಿಸಿ ಪಟ್ಟಿಯಿಂದ ಕೈಬಿಡುವುದು. ಈ ಹಿಂದೆ ಎರಡು ಬಾರಿ ಅವಕಾಶ ನೀಡಿದರೂ ನಿರೀಕ್ಷಿತ ಪ್ರಗತಿ ಕಂಡುಬಂದಿಲ್ಲ. ಜೂನ್ 30ರ ನಂತರ ಈ ಪಟ್ಟಿಯನ್ನೇ ಅಂತಿಮ ಎಂದು ಪರಿಗಣಿಸಲಾಗುತ್ತದೆ. ಆದ್ದರಿಂದ ಒಂದು ವೇಳೆ ಅನರ್ಹರನ್ನು ಪಟ್ಟಿಯಲ್ಲಿ ಉಳಿಸಿಕೊಂಡರೆ ಅಥವಾ ಅರ್ಹರನ್ನು ಕೈಬಿಟ್ಟರೆ, ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸಿಇಓ ಅವರು ಎಚ್ಚರಿಕೆ ನೀಡಿದ್ದಾರೆ.


# ನೇರ ಸಂದರ್ಶನ

ಗದಗ: ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಗದಗ ವತಿಯಿಂದ ನೇರ ಸಂದರ್ಶನವಿದ್ದು ಜೂನ್ 15 ಸೋಮವಾರ ರಂದು ಬೆಳೆಗ್ಗೆ 10-00 ಗಂಟೆಗೆ ನಗರದ ಮುಥೋಟ ಫೀನ್ ಕಾರ್ಪ ಲಿಮಿಟೆಡ್, ಸ್ಟೇಷನ್ ರೋಡ ಹಳೆ ಕಾಮತ ಎದುರುಗಡೆ, ನೇರ ಸಂರ್ದಶನ ಹಮ್ಮಿಕೊಳ್ಳಲಾಗಿದೆ.

ನೇರ ಸಂರ್ದಶನದಲ್ಲಿ ಮುಥೋಟ ಫೀನ್ ಕಾರ್ಪ ಲಿಮಿಟೆಡ್,ಭಾಗವಹಿಸಲಿದೆ. ಬಿಸಿನೆಸ ಡೆವೆಲಂಪಮೆಂಟ ಆಪೀಸರ್, ಕಸ್ಟಮರ್ ಸರ್ವಿಸ್ ಎಕ್ಸಿಕ್ಯೂಟಿವ. ಹುದ್ದೆ ಖಾಲಿ ಇದೆ. ಯಾವುದೆ ಪದವಿಯನ್ನು ಹೊಂದಿರಬೇಕು.ಕನಿಷ್ಠ 6 ತಿಂಗಳುಗಳ ಅನುಭವ ಹೊಂದಿರಬೇಕು. 18 ರಿಂದ 28 ( ಪುರುಷ ಮಾತ್ರ ಮಹಿಳೆ ) ವಯಸ್ಸು ಹೊಂದಿರಬೇಕು. ಗದಗ, ನರಗುಂದ, ರೋಣ, ಮುಂಡರಗಿ, ಗಜೇಂದ್ರಗಡ, ಹುಲಕೋಟಿ, ಅಣ್ಣಿಗೇರಿ, ಲಕ್ಷೇಶ್ವರದಲ್ಲಿ ಕೇಲಸ ಇವೆ. ನೇರ ಸಂರ್ದಶನದಲ್ಲಿ ಪಾಲ್ಗೋಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝರಾಕ್ಸ್ ಪ್ರತಿಗಳು, 2 ರೆಸ್ಯೂಮ(ಬಯೋಡಾಟಾ)ಪ್ರತಿಗಳು, ಮತ್ತು ಆಧಾರ ಕಾರ್ಡ್ ಝರಾಕ್ಸ್ನೊಂದಿಗೆ ಭಾಗವಹಿಸಬಹುದು. ನೇರ ಸಂರ್ದಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹಾಗೂ ಯುವನಿಧಿ ಯೋಜನೇಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೋಳಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ, 8431602181, 6363330688 ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಟಾಪರ್ ವಿದ್ಯಾರ್ಥಿಗಳಿಗೆ ಜೂನ್.16ರಂದು ಸನ್ಮಾನ

ಗದಗ: ಭಾರತೀಯ ವೈದ್ಯಕೀಯ ಸಂಘ (ಐಎಂಎ) ಗದಗ ಘಟಕದ ಶತಮಾನೋತ್ಸವ ಆಚರಣೆ ಅಂಗವಾಗಿ, 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಯಲ್ಲಿ ಅತ್ಯುತ್ತಮ ಸಾಧನೆಗೈದ ವಿದ್ಯಾರ್ಥಿಗಳ ಸನ್ಮಾನ ಸಮಾರಂಭವನ್ನು ಜೂನ್ 16ರಂದು ಸಂಜೆ 4 ಗಂಟೆಗೆ ಗದಗ ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.




ಜಿಲ್ಲಾಡಳಿತ, ಗದಗ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಎಸ್-ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ಅಗ್ರಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರೋತ್ಸಾಹಿಸಲಾಗುವುದು. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಐಎಎಸ್ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಹಾಗೂ ಕುಲಸಚಿವ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ ಭಾಗವಹಿಸಲಿದ್ದಾರೆ. ಐಎಂಎ ಗದಗ ಶತಮಾನೋತ್ಸವ ಸಮಿತಿ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ ಅಧ್ಯಕ್ಷತೆ ವಹಿಸಲಿದ್ದಾರೆ. ಐಎಂಎ ಗದಗ ಅಧ್ಯಕ್ಷ ಡಾ. ಶ್ರೀಧರ ವಿ. ಕುರಡಗಿ, ಶತಮಾನೋತ್ಸವ ಸಮಿತಿ ಕಾರ್ಯದರ್ಶಿ ಡಾ. ಪವನ್ ಪಾಟೀಲ ಹಾಗೂ ಐಎಂಎ ಕಾರ್ಯದರ್ಶಿ ಡಾ. ರಾಹುಲ್ ಶಿರೋಳ ಕಾರ್ಯಕ್ರಮದ ಆಯೋಜನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಶೈಕ್ಷಣಿಕ ಸಾಧಕರನ್ನು ಗುರುತಿಸಿ ಗೌರವಿಸುವುದು ಹಾಗೂ ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಉತ್ಸಾಹವನ್ನು ಹೆಚ್ಚಿಸುವ ಉದ್ದೇಶದಿಂದ ಈ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಶಿಕ್ಷಣಾಭಿಮಾನಿಗಳು, ಪಾಲಕರು, ಶಿಕ್ಷಕರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

# ಜಿ.ಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ ವಿಧಾನಸೌಧದ ಎದುರು ಪ್ರತಿಭಟನೆ:ಮುರುಘೇಂದ್ರ ಶ್ರೀ

ರೋಣ : ರೋಣ ಶಾಸಕ ಜಿ.ಎಸ್ ಪಾಟೀಲರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಆಗ್ರಹಿಸಿ ವಿವಿಧ ಮಠಾಧೀಶರ ನೇತೃತ್ವದಲ್ಲಿ ಕಾರ್ಮಿಕರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಶುಕ್ರವಾರ ಪಟ್ಟಣದ ಮೂಲ್ಲನಬಾಯಿ ವೃತ್ತದ ಬಳಿ ಧರಣಿ ನಡೆಸಿದರು.



ಕೊಟ್ಟ ಮಾತಿನಂತೆ ಹೈಕಮಾಂಡ್ ಶಾಸಕ ಜಿ.ಎಸ್ ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು, ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಅಸೂಟಿಯ ಮುರುಗೇಂದ್ರ ಶಿವಯೋಗಿಗಳು ಮಾತನಾಡಿ, ಜಿ.ಎಸ್ ಪಾಟೀಲ ಅವರು ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಹಿರಿಯ ಜನನಾಯಕರಾಗಿದ್ದು, ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಅವರ ರಾಜಕೀಯ ಅನುಭವ ಮತ್ತು ಸಂಘಟನಾ ಸಾಮರ್ಥ್ಯ ಪರಿಗಣಿಸಿ, ರಾಜ್ಯ ಸಚಿವ ಸಂಪುಟದಲ್ಲಿ ಅವರಿಗೆ ಸೂಕ್ತ ಸ್ಥಾನಮಾನ ನೀಡಬೇಕು, ಇಲ್ಲದಿದ್ದರೆ ನೂರಾರು ಮಠಾಧೀಶರ ಸಮ್ಮುಖದಲ್ಲಿ ವಿಧಾನಸೌಧದ ಮುಂದೆ ಧರಣಿ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮುಂಬರುವ ಚುನಾವಣೆಗಳ ದೃಷ್ಟಿಯಿಂದಲೂ ಶಾಸಕ ಜಿ ಎಸ್ ಪಾಟೀಲ್ ಅವ-ರಿಗೆ ಸಚಿವ ಸ್ಥಾನ ನೀಡುವುದು ಸಂಘಟನಾತ್ಮಕವಾಗಿ ಕಾಂಗ್ರೆಸ್ ಪಕ್ಷಕ್ಕೆ ಅನುಕೂಲವಾಗಲಿದೆ ಎಂದು ಆಗ್ರಹಿಸಿದರು. ಸಯ್ಯದ್ ಸುಲೇಮಾನ್ ಶಾಪ್ಲಿ ದರ್ಗಾದ ಅಜ್ಜನವರು ಮಾತನಾಡಿ, ಉತ್ತರ ಕರ್ನಾಟಕಕ್ಕೆ ಸಚಿವ ಸಂಪುಟದಲ್ಲಿ ನಿರಂತರವಾಗಿ ಅನ್ಯಾಯವಾಗುತ್ತಿದೆ, ಜನಪರ ಹೋರಾಟಗಳು,ಸಂಘಟನಾ ಸಾಮರ್ಥ್ಯ ಮತ್ತು ಆಡಳಿತಾತ್ಮಕ ಅನುಭವ ಹೊಂದಿರುವ ಜಿಎಸ್ ಪಾಟೀಲ್ ಅವರನ್ನು ಮತ್ತೆ ಕಡೆಗಣಿಸಿರುವುದು ಈ ಭಾಗದ ಜನರ ಭಾವನೆಗಳಿಗೆ ದಕ್ಕೆ ಉಂಟು ಮಾಡಲಿದೆ ಎಂದು ಎಚ್ಚರಿಸಿದರು.

ಹಾಲುಮತ ಸಮಾಜದ ರೋಣ ತಾಲೂಕ ಅಧ್ಯಕ್ಷ ಬಸವರಾಜ ಜಗ್ಗಲ್ ಮಾತನಾಡಿ, ನಾಲ್ಕು ಬಾರಿ ಜನರಿಂದ ಆಯ್ಕೆಯಾಗಿರುವ ನಾಯಕನನ್ನು ನಿರಂತರವಾಗಿ ನಿರ್ಲಕ್ಷಿಸುವುದು ಸರಿಯಲ್ಲ, ಬಡವರು, ಕಾರ್ಮಿಕರು ದಲಿತರು ಹಾಗೂ ಹಿಂದುಳಿದ ವರ್ಗಗಳ ಪರ ಧ್ವನಿಯಾಗಿರುವ ಜಿಎಸ್ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಸರಕಾರ ಉತ್ತರ ಕರ್ನಾಟಕದ ಅಶೋತ್ತರಗಳಿಗೆ ಸ್ಪಂದಿಸಬೇಕೆಂದು ಆಗ್ರಹಿಸಿದರು. ಮರುಳಸಿದ್ದೇಶ್ವರ ಮಠದ ತದಿಗೆಪ್ಪಜ್ಜನವರು ಮಾತನಾಡಿ, ರೋಣ ಮತಕ್ಷೇತ್ರದ ಜನರ ಸಹನೆಯನ್ನು ಪರೀಕ್ಷಿಸಬೇಡಿ, ಶಾಸಕ ಜಿ ಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ, ಜನರು ಹಾಗೂ ಸ್ವಾಮೀಜಿಗಳು ಬೀದಿಗಿಳಿಯುವ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಎಚ್ಚರಿಕೆ ನೀಡಿದರು.ಸವಡಿ ಮರಳಸಿದ್ದೇಶ್ವರ ಸ್ವಾಮಿಗಳು , ಲಕ್ಕುಂಡಿಯ ಹುಚ್ವಯ್ಯ ಸ್ವಾಮಿಜಿ,ಸದ್ಧರ್ಮ ಪೀಠದ ಶಿವಮುನಿ ಸ್ವಾಮಿಜಿಗಳು, ಯಲ್ಲಾಲಿಂಗೇಶ್ವರ ಮಠದ ಬಸವ ಜಯಂತಿ ರಾಜೇಂದ್ರ ಶ್ರೀಗಳು ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಏಷ್ಯನ್ ಆಟ್ಯಾಪಟ್ಯಾದಲ್ಲಿ ಗದಗದ ಯುವಕರ ಚಿನ್ನದ ಸಾಧನೆ

# ಭೂತಾನ್‌ನಲ್ಲಿ ನಡೆದ ಅಂತರರಾಷ್ಟ್ರೀಯ ಚಾಂಪಿಯನ್‌ಶಿಪ್‌ನಲ್ಲಿ ಎರಡು ವಿಭಾಗಗಳಲ್ಲಿ ಭಾರತಕ್ಕೆ ಚಿನ್ನದ ಪದಕ ; ಗದಗ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಅವರಿಂದ ಸನ್ಮಾನ

ಗದಗ: ಅಂತರರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಗದಗ ಜಿಲ್ಲೆಯ ಇಬ್ಬರು ಯುವ ಕ್ರೀಡಾಪಟುಗಳು ಸಾಧನೆ ಮೆರೆದಿದ್ದು, ಭೂತಾನ್‌ನಲ್ಲಿ ನಡೆದ ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನದ ಪದಕ ಗೆದ್ದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಾಧಕರಾದ ರಾಹುಲ್ ಶೇಖರ್ ಕಾರಭಾರಿ ಹಾಗೂ ಉಳವೇಶ ಶಿವಾಜಿ ಲಮಾಣಿ ಅವರನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಸನ್ಮಾನಿಸಿ ಅಭಿನಂದಿಸಿದರು.

ಜೂನ್ 7 ರಿಂದ 10ರವರೆಗೆ ಭೂತಾನ್‌ನಲ್ಲಿ ನಡೆದ 3ನೇ ಸೀನಿಯರ್ ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ತಂಡವನ್ನು ಪ್ರತಿನಿಧಿಸಿದ್ದ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಶಿಂಗಟರಾಯನಕೇರಿ ತಾಂಡಾದ ಕ್ರೀಡಾಪಟು ರಾಹುಲ್ ಶೇಖರ್ ಕಾರಭಾರಿ ಅವರು ತಮ್ಮ ತಂಡದೊಂದಿಗೆ ಭರ್ಜರಿ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಮುಡಿಗೇರಿಸಿಕೊಂಡರು. 15 ಆಟಗಾರರನ್ನು ಒಳಗೊಂಡಿದ್ದ ಭಾರತೀಯ ತಂಡವು ಪ್ರತಿಸ್ಪರ್ಧಿಗಳನ್ನು ಮಣಿಸಿ ಪ್ರಶಸ್ತಿ ಗೆಲ್ಲುವ ಮೂಲಕ ದೇಶದ ಕೀರ್ತಿಯನ್ನು ಹೆಚ್ಚಿಸಿತು. ಅದೇ ರೀತಿ ಜೂನ್ 4 ರಿಂದ 6ರವರೆಗೆ ಭೂತಾನ್‌ನಲ್ಲಿ ನಡೆದ ಪ್ರಥಮ ಜೂನಿಯರ್ (ಅಂಡರ್-19) ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ದೇವಿಹಾಳ ತಾಂಡಾದ ಯುವ ಕ್ರೀಡಾಪಟು ಉಳವೇಶ ಶಿವಾಜಿ ಲಮಾಣಿ ಅವರು ಭಾರತೀಯ ತಂಡದ ನಾಯಕನಾಗಿ ಕಾರ್ಯನಿರ್ವಹಿಸಿ ತಂಡವನ್ನು ವಿಜಯದತ್ತ ಮುನ್ನಡೆಸಿದರು. ಅವರ ನೇತೃತ್ವದ 15 ಸದಸ್ಯರ ತಂಡ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಜಯಿಸಿತು. ಜಿಲ್ಲಾಡಳಿತ ಭವನದಲ್ಲಿ ನಡೆದ ಸನ್ಮಾನ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಇಬ್ಬರು ಕ್ರೀಡಾಪಟುಗಳ ಸಾಧನೆಯನ್ನು ಶ್ಲಾಘಿಸಿ, ಅಂತರರಾಷ್ಟ್ರೀಯ ಮಟ್ಟದಲ್ಲಿ ಗದಗ ಜಿಲ್ಲೆಯ ಹೆಸರು ಬೆಳಗಿಸಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು. ಗ್ರಾಮೀಣ ಭಾಗದ ಯುವಕರು ಪರಿಶ್ರಮ ಮತ್ತು ಪ್ರತಿಭೆಯಿಂದ ವಿಶ್ವಮಟ್ಟದ ಸಾಧನೆ ಮಾಡಿರುವುದು ಇತರ ಯುವಕರಿಗೂ ಸ್ಪೂರ್ತಿದಾಯಕವಾಗಿದೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಮಾಜಿ ಸಚಿವ ಎಚ್.ಕೆ. ಪಾಟೀಲ ಹಾಗೂ ಶಾಸಕ ಜಿ. ಎಸ್. ಪಾಟೀಲ ಅವರು ದೂರವಾಣಿ ಮೂಲಕ ಕ್ರೀಡಾಪಟುಗಳೊಂದಿಗೆ ಮಾತನಾಡಿ ಅಭಿನಂದನೆ ಸಲ್ಲಿಸಿದರು. ಅಂತರರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ



ಪದಕ ಗೆದ್ದು ಜಿಲ್ಲೆ ಹಾಗೂ ರಾಜ್ಯದ ಕೀರ್ತಿಯನ್ನು ಹೆಚ್ಚಿಸಿರುವ ಇವರ ಸಾಧನೆ ಶ್ಲಾಘನೀಯವಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಸಾಧನೆಗಳನ್ನು ಮಾಡುವಂತೆ ಹಾರೈಸಿದರು.

ಭಾರತೀಯ ಆಟ್ಯಾಪಟ್ಯಾ ತಂಡಗಳ ಈ ಸಾಧನೆ ದೇಶದ ಕ್ರೀಡಾ ಕ್ಷೇತ್ರಕ್ಕೆ ಹೊಸ ಉತ್ತೇಜನ ನೀಡಿದ್ದು, ಗದಗ ಜಿಲ್ಲೆಯ ಕ್ರೀಡಾ ಪ್ರತಿಭೆಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿರುವುದು ಜಿಲ್ಲೆಯ ಜನತೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೊಗೇರಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಮನೋಜ್ ರಾಠೋಡ, ಕ್ರೀಡಾ ಸಾಧಕ ಯುವಕರ ಪಾಲಕರು, ಸ್ನೇಹಿತರು, ತರಬೇತುದಾರರು ಹಾಜರಿದ್ದರು.

# ಜಗಳ ಬಿಡಿಸಲು ಹೋದ ಪೊಲೀಸ್ ಸಿಬ್ಬಂದಿ ಮೇಲೆ ಪುಂಡರ ದಾಳಿ ಮನಬಂದಂತೆ ಹಲ್ಲೆ ನಡೆಸಿದವರ ಬಂಧನ


ಗದಗ: ಸಾರ್ವಜನಿಕ ಸ್ಥಳದಲ್ಲಿ ಎರಡು ಗುಂಪುಗಳ ನಡುವೆ ನಡೆಯುತ್ತಿದ್ದ ಗಲಾಟೆಯನ್ನು ತಡೆದು, ಪರಿಸ್ಥಿತಿ ನಿಯಂತ್ರಿಸಲು ಮುಂದಾದ ಪೊಲೀಸ್ ಸಿಬ್ಬಂದಿ ಮೇಲೆ ಪುಂಡರ ಗುಂಪೊಂದು ಹಲ್ಲೆ ನಡೆಸಿದ ಘಟನೆ ಗದಗ ನಗರದಲ್ಲಿ ನಡೆದಿದೆ. ಈ ಘಟನೆ ನಗರದ ಧೋಬಿಘಾಟ್ ಪ್ರದೇಶದ ಸಮೀಪ ಇರುವ ಡ್ರಿಂಕ್ಸ್ ಫ್ಯಾಕ್ಟರಿ ಬಾರ್ ಎದುರು ನಡೆದಿದ್ದು, ಪ್ರಕರಣವು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ.





ಮಾಹಿತಿಯ ಪ್ರಕಾರ, ನಿನ್ನೆ ತಡರಾತ್ರಿ ವೇಳೆ ಧೋಬಿ ಘಾಟ್ ಸರ್ಕಲ್ ಬಳಿ ಇರುವ ಡ್ರಿಂಕ್ಸ್ ಫ್ಯಾಕ್ಟರಿ ಬಾರ್ ಬಳಿ ಕೆಲ ಯುವಕರು ಪರಸ್ಪರ ಜಗಳವಾಡುತ್ತಿದ್ದರು. ಜಗಳ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದ ಹಿನ್ನೆಲೆಯಲ್ಲಿ ಅಲ್ಲಿದ್ದವರು ಪರಿಸ್ಥಿತಿಯನ್ನು ಗಮನಿಸುತ್ತಿದ್ದರು. ಇದೇ ವೇಳೆ ಸ್ಥಳಕ್ಕೆ ಬಂದ ಪೊಲೀಸ್ ಸಿಬ್ಬಂದಿ ಅಶೋಕ ಪಾಟೀಲ ಅವರು ಜಗಳವಾಡುತ್ತಿದ್ದ ಯುವಕ-ರಿಗೆ ಬುದ್ಧಿವಾದ ಹೇಳಿ, ಗಲಾಟೆಯನ್ನು ನಿಲ್ಲಿಸಲು ಮುಂದಾಗಿದ್ದಾರೆ. ಆದರೆ, ಪರಿಸ್ಥಿತಿ ನಿಯಂತ್ರಣ-ಕ್ಕೆ ಬರುವ ಬದಲು ಮತ್ತಷ್ಟು ಉಲ್ಬಣಗೊಂಡಿದ್ದು, ಜಗಳವಾಡುತ್ತಿದ್ದ ಯುವಕರ ಗುಂಪು ಏಕಾಏಕಿ ಪೊಲೀಸ್ ಸಿಬ್ಬಂದಿಯ ಮೇಲೆಯೇ ತಿರುಗಿಬಿದ್ದಿದೆ ಎನ್ನಲಾಗಿದೆ. ಸುಮಾರು 6 ರಿಂದ 7 ಮಂದಿ ಸೇರಿಕೊಂಡು ಅಶೋಕ ಪಾಟೀಲ ಅವರ ಮೇಲೆ ಮನಬಂದಂತೆ ಹಲ್ಲೆ ನಡೆಸಿರುವ ಆರೋಪವಿದ್ದು, ಈ ಬಗ್ಗೆ ಮೊಬೈಲ್'ನಲ್ಲಿ ಸೆರೆ ಹಿಡಿಯಲಾದ ದೃಶ್ಯಗಳು ವೈರಲ್ ಆಗಿವೆ. ಹಲ್ಲೆ ವೇಳೆ ಆರೋಪಿಗಳಲ್ಲಿ ಒಬ್ಬ ತನ್ನ ಕೈಯಲ್ಲಿ ಧರಿಸಿದ್ದ ಲೋಹದ ಕಡಗವನ್ನು ಬಳಸಿ ಪೊಲೀಸ್ ಸಿಬ್ಬಂದಿಗೆ ಹೊಡೆದಿರುವುದಾಗಿ ತಿಳಿದುಬಂದಿದೆ. ಇದರಿಂದ ಅಶೋಕ ಪಾಟೀಲ ಅವರಿಗೆ ಗಾಯಗಳಾಗಿದ್ದು, ಗದಗ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲಾಗಿದೆ ಎಂದು ಮೂಲಗಳು ತಿಳಿಸಿವೆ.

ಘಟನೆಯ ಮತ್ತೊಂದು ಅಚ್ಚರಿಯ ಸಂಗತಿ ಎಂದರೆ, ಹಲ್ಲೆ ನಡೆಯುತ್ತಿದ್ದ ವೇಳೆ ಅಲ್ಲೇ ಇದ್ದ ಮತ್ತೋರ್ವ ಪೊಲೀಸ್ ಸಿಬ್ಬಂದಿ ಘಟನೆಯನ್ನು ನೋಡುತ್ತ ನಿಂತಿರುವ ದೃಶ್ಯವೂ ವಿಡಿಯೋದಲ್ಲಿದೆ. ಈ ಕುರಿತು ಇಲಾಖೆಯೊಳಗೂ ಚರ್ಚೆ ಆರಂಭವಾಗಿದ್ದು, ಘಟನೆಯ ಸಂಪೂರ್ಣ ಸತ್ಯಾಸತ್ಯತೆ ಕುರಿತು ತನಿಖೆ ನಡೆಯುತ್ತಿದೆ. ಹಲ್ಲೆಗೊಳಗಾದ ಅಶೋಕ ಪಾಟೀಲ ಅವರು



ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಸಿಬ್ಬಂದಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎನ್ನಲಾಗಿದೆ. ಸಾರ್ವಜನಿಕ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುವ ಪೊಲೀಸ್ ಸಿಬ್ಬಂದಿಯ ಮೇಲೆಯೇ ಇಂತಹ ಹಲ್ಲೆ ನಡೆದಿರುವುದು ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಗಂಭೀರ ಬೆಳವಣಿಗೆಯಾಗಿ ಪರಿಗಣಿಸಲಾಗಿದೆ. ಘಟನೆಯ ಸಂಬಂಧ ಗದಗ ಗ್ರಾಮೀಣ ಪೊಲೀಸರು ಹಲ್ಲೆ ನಡೆಸಿದ ಆರೋಪಿಗಳನ್ನು ಗುರುತಿಸಿ ಬಂಧಿಸುವ ಕಾರ್ಯವನ್ನು ಕೈಗೊಂಡಿದ್ದಾರೆ.

ಈ ಘಟನೆ ಪೊಲೀಸ್ ಇಲಾಖೆಯಲ್ಲಿಯೂ ಆಕ್ರೋಶಕ್ಕೆ ಕಾರಣವಾಗಿದ್ದು, ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗೆ ರಕ್ಷಣೆ ಒದಗಿಸುವ ಜೊತೆಗೆ ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬ ಒತ್ತಾಯ ಕೇಳಿಬರುತ್ತಿದೆ. ಪೊಲೀಸರು ಸಿಸಿಟಿವಿ ದೃಶ್ಯಗಳು ಹಾಗೂ ವೈರಲ್ ವಿಡಿಯೊಗಳ ಆಧಾರದ ಮೇಲೆ ತನಿಖೆಯನ್ನು ಮುಂದುವರಿಸಿದ್ದಾರೆ.

# ಕೆಆರ್ ಮಾರ್ಕೆಟ್ ಸ್ವಚ್ಚತೆಗೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ



**ಬೆಂಗಳೂರು:** ನಗರದ ಕೆ.ಆರ್. ಮಾರುಕಟ್ಟೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಸ್ವಚ್ಛತೆ ಮತ್ತು ಸುಗಮ ನಿರ್ವಹಣೆಗೆ ಬೆಂಗಳೂರು ಕೇಂದ್ರ ನಗರ ಪಾಲಿಕೆ ಕ್ರಮ ಕೈಗೊಂಡಿದೆ. ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರ ಇತ್ತೀಚಿನ ಭೇಟಿ ವೇಳೆ ನೀಡಿದ ಸೂಚನೆಗಳ ಹಿನ್ನೆಲೆಯಲ್ಲಿ ಅಭಿವೃದ್ಧಿ ಅಪರ ಆಯುಕ್ತ ವೆಂಕಟಾಚಲಪತಿ ಅವರು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಹಲವು ಮಹತ್ವದ ನಿರ್ದೇಶನಗಳನ್ನು ನೀಡಿದ್ದಾರೆ.

ಮಾರುಕಟ್ಟೆಯ ತಳಮಹಡಿಯಲ್ಲಿರುವ ಹೂವಿನ ಮಾರುಕಟ್ಟೆಯನ್ನು ಸಮಗ್ರವಾಗಿ ಸ್ವಚ್ಛಗೊಳಿಸುವಂತೆ ಸೂಚನೆ ನೀಡಲಾಗಿದೆ. ಮಾರುಕಟ್ಟೆ ಮುಂಭಾಗದಲ್ಲಿ ಕೊತ್ತಂಬರಿ ಸೊಪ್ಪು ಮಾರಾಟ ನಡೆಯುವ ಪ್ರದೇಶದಲ್ಲಿ ಮಳೆಗಾಲದಲ್ಲಿ ನೀರು ನಿಂತು ಗಲೀಜಾಗುತ್ತಿರುವ ಹಿನ್ನೆಲೆ, ಗುಂಡಿಗಳನ್ನು ಮುಚ್ಚಿ ಸಂಪೂರ್ಣ ಕಾಂಕ್ರೀಟ್ ಅಳವಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ. ಸ್ವಚ್ಛತಾ ಕಾರ್ಯವನ್ನು ಪರಿಣಾಮಕಾರಿಯಾಗಿ ನಡೆಸಲು ಹೆಚ್ಚುವರಿ ಮಾರ್ಷಲ್‌ಗಳನ್ನು ನಿಯೋಜಿಸುವಂತೆ ಸೂಚಿಸಲಾಗಿದ್ದು, ಮೊದಲ ಮಹಡಿಯಲ್ಲಿರುವ ಶೌಚಾಲಯವನ್ನು ಸಾರ್ವಜನಿಕ ಬಳಕೆಗೆ ತೆರೆಯಲು ಕ್ರಮ ಕೈಗೊಳ್ಳಲು ತಿಳಿಸಲಾಗಿದೆ. ಕೆ.ಆರ್. ಮಾರುಕಟ್ಟೆ ಕಟ್ಟಡದ ಒಳಗೆ ಹಾಗೂ ಮುಂಭಾಗದಲ್ಲಿ ಕಂಡುಬರುವ ಒತ್ತುವರಿಗಳನ್ನು ಗುರುತಿಸಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಮೊದಲು ಒತ್ತುವರಿದಾರರಿಗೆ ನಿಗದಿತ ಕಾಲಾವಕಾಶ ನೀಡಲಾಗುವುದು. ಆ ಅವಧಿಯಲ್ಲೂ ತೆರವುಗೊಳಿಸದಿದ್ದರೆ ಪಾಲಿಕೆಯೇ ತೆರವು ಕಾರ್ಯಾಚರಣೆ ನಡೆಸಲಿದೆ ಎಂದು ಎಚ್ಚರಿಕೆ ನೀಡಲಾಗಿದೆ. ತ್ಯಾಜ್ಯ ನಿರ್ವಹಣೆಯನ್ನು ಸುಧಾರಿಸುವ ಉದ್ದೇಶದಿಂದ ತ್ಯಾಜ್ಯ ಸಂಗ್ರಹ ಮತ್ತು ವಿಲೇವಾರಿಗೆ ಅಗತ್ಯವಾದ ಶೆಡ್ ನಿರ್ಮಾಣಕ್ಕೆ ಕೂಡಲೇ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಜೊತೆಗೆ ಮಾರುಕಟ್ಟೆ ಮುಂಭಾಗದಲ್ಲಿ ವ್ಯಾಪಾರಿಗಳಿಗೆ ನಿಗದಿತ ವ್ಯಾಪಾರ ಸ್ಥಳಗಳನ್ನು ಗುರುತಿಸಿ ಲೈನಿಂಗ್ ವ್ಯವಸ್ಥೆ ಮಾಡಲಾಗುವುದು. ನಿಗದಿತ ಸ್ಥಳ ಬಿಟ್ಟು ಸಂಚಾರಕ್ಕೆ ಅಡ್ಡಿಯಾಗುವ ರೀತಿಯಲ್ಲಿ ವ್ಯಾಪಾರ ನಡೆಸುವವರ ವಿರುದ್ಧ ದಂಡಾತ್ಮಕ ಕ್ರಮ ಕೈಗೊಳ್ಳಲಾಗುತ್ತಿದೆ. ಸಭೆಯಲ್ಲಿ ಜಂಟಿ ಆಯುಕ್ತ ಹೇಮಂತ್ ಶರಣ್, ಮುಖ್ಯ ಅಭಿಯಂತರ ವಿಜಯ್ ಕುಮಾರ್ ಹರಿದಾಸ್, ಅಧೀಕ್ಷಕ ಅಭಿಯಂತರರು, ಡಿಜಿಎಂ, ಪೊಲೀಸ್ ಅಧಿಕಾರಿಗಳು ಹಾಗೂ ಇತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ಒಂಟಿ ಪುರುಷ ಸರ್ಕಾರಿ ನೌಕರರಿಗೂ ಶಿಶುಪಾಲನಾ ರಜೆ




**ಬೆಂಗಳೂರು:** ರಾಜ್ಯ ಸರ್ಕಾರವು ಒಂಟಿ ಪುರುಷ ಸರ್ಕಾರಿ ನೌಕರರಿಗೂ ಶಿಶುಪಾಲನಾ ರಜೆಯ ಸೌಲಭ್ಯವನ್ನು ವಿಸ್ತರಿಸಿದೆ. ಇದು ಕೇವಲ ಆಡಳಿತಾತಕ ಕ್ರಮವಲ್ಲ, ಅದು ಮಕ್ಕಳ ಹೃದಯದ ಹಕ್ಕನ್ನು ಮಾನ್ಯಗೊಳಿಸುವ ಮಾನವೀಯ ಹೆಜ್ಜೆಯಾಗಿದ್ದು, ಇಂತಹ ಮಹತ್ವದ ನಿರ್ಧಾರ ಕೈಗೊಂಡಿದೆ.

ಇದುವರೆಗೆ ಶಿಶುಪಾಲನಾ ರಜೆಯ ಸೌಲಭ್ಯವನ್ನು ಕೇವಲ ಮಹಿಳಾ ಸರ್ಕಾರಿ ನೌಕರರಿಗೆ ಮಾತ್ರ ನೀಡಲಾಗುತ್ತಿತ್ತು. ಆದರೆ, ಮಕ್ಕಳ ಆರೈಕೆಗಾಗಿ ಒಂಟಿ ಪುರುಷ ನೌಕರರಿಗೂ ಇದೇ ಹಕ್ಕು ಅಗತ್ಯವೆಂದು ಪರಿಗಣಿಸಿ, ಸರ್ಕಾರವು 6 ತಿಂಗಳವರೆಗೆ (180 ದಿನ) ಶಿಶುಪಾಲನಾ ರಜೆಯನ್ನು ಮಂಜೂರು ಮಾಡಿದೆ. ಮಕ್ಕಳ ಬಾಲ್ಯವೆಂದರೆ ತಾಯಿಯ ಮಡಿಲು, ತಂದೆಯ ಕೈಹಿಡಿತ, ಮತ್ತು ಕುಟುಂಬದ ಸಾಮರಸ್ಯದೊಂದಿಗೆ ಬೆಳೆಯುವ ಕನಸುಗಳ ಕಾಲ. ಆದರೆ ಜೀವನದ ಅಸಮಂಜಸ ತಿರುವುಗಳಲ್ಲಿ ಕೆಲವೊಮೆ ತಂದೆಯೇ ಒಂಟಿ, ತಾಯಿ ಇಲ್ಲದಾಗ, ತಂದೆಯೇ ಮಡಿಲು, ತಂದೆಯೇ ಆರೈಕೆ, ತಂದೆಯೇ ಪ್ರೀತಿ. ಇಂತಹ ಸಂದರ್ಭಗಳಲ್ಲಿ ಮಕ್ಕಳಿಗೆ ತಂದೆಯ ಸಾನ್ನಿಧ್ಯ ಅತ್ಯಗತ್ಯ. ಅವರ ಕಣ್ಣಲ್ಲಿ ತಾಯಿಯ ಮಮತೆ, ತಂದೆಯ ಹೊಣೆಗಾರಿಕೆ ಒಂದೇ ಆಗಿ ಬೆರೆತು, ಭದ್ರತೆಯ ಭಾವನೆ ನೀಡುತ್ತದೆ. ಈ ನಿಜವಾದ ಅಗತ್ಯವನ್ನು ಮನಗಂಡು ಈ ನಿರ್ಧಾರ ತೆಗೆದುಕೊಂಡಿದೆ. ಮಕ್ಕಳಿಗೆ ತಾಯಿ ಎಂಬುದು ಭಾವನಾತಕ ಆಧಾರ. ಆದರೆ, ಜೀವನದ ಅಸಮಂಜಸ ಪರಿಸ್ಥಿತಿಗಳಲ್ಲಿ ತಂದೆಯು ಒಂಟಿಯಾಗಿರುವ ಸಂದರ್ಭಗಳು ಹೆಚ್ಚಾಗುತ್ತವೆ. ವಿಧುರರು, ವಿವಾಹ-ವಿಚ್ಛೇದಿತರಾದವರು ಅಥ-ವಾ ಅವಿವಾಹಿತರು ತಮ ಮಕ್ಕಳಿಗೆ ತಾಯಿ-ತಂದೆಯೆರಡರ ಪಾತ್ರವನ್ನೂ ನಿರ್ವಹಿಸಬೇಕಾಗುತ್ತದೆ. ಇಂತಹ ಸಂದರ್ಭಗಳಲ್ಲಿ ಮಕ್ಕಳಿಗೆ ತಂದೆಯ ಸಾನ್ನಿಧ್ಯ, ಆರೈಕೆ, ಪ್ರೀತಿ ಅತ್ಯಗತ್ಯ. ಈ ನಿರ್ಧಾರವು ಮಕ್ಕಳ ಹಕ್ಕನ್ನು ಕಾಪಾಡುವ ಜೊತೆಗೆ ತಂದೆಯ ಹೊಣೆಗಾರಿಕೆಯನ್ನು ಮಾನ್ಯಗೊಳಿಸುತ್ತದೆ. ಸರ್ಕಾರದ ಆದೇಶದಲ್ಲಿ ಸ್ಪಷ್ಟವಾಗಿ ಹೇಳಿರುವಂತೆ, ಒಂಟಿ ಪುರುಷರು ಈ ರಜೆಯನ್ನು ಪಡೆಯಬಹುದು. ಆದರೆ, ಅವರು ರಜೆಯ ಅವಧಿಯಲ್ಲಿ ವಿವಾಹ ಮಾಡಿಕೊಂಡರೆ, ಆ ದಿನಾಂಕದಿಂದಲೇ ರಜೆ ತಾನಾಗಿಯೇ ರದ್ದುಗೊಳ್ಳುತ್ತದೆ. ಇದು ಮಕ್ಕಳ ಆರೈಕೆಯ ನಿಜವಾದ ಅಗತ್ಯವನ್ನು ಗಮನದಲ್ಲಿಟ್ಟುಕೊಂಡ ನಿಯಮವಾಗಿದೆ. ಈ ನಿರ್ಧಾರವು ಕೇವಲ ಆಡಳಿತಾತಕ ಕ್ರಮವಲ್ಲ, ಅದು ಮಕ್ಕಳ ಹೃದಯದ ಹಕ್ಕನ್ನು ಮಾನ್ಯಗೊಳಿಸುವ ಮಾನವೀಯ ಹೆಜ್ಜೆ. ತಾಯಿ ಇಲ್ಲದಿದ್ದಾಗ ತಂದೆಯೇ ತಾಯಿಯಂತೆ ಮಡಿಲು ನೀಡುವ ಹಕ್ಕನ್ನು ಸರ್ಕಾರ ಮಾನ್ಯಗೊಳಿಸಿದೆ.

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಅಮೆರಿಕ ವಾಯುದಾಳಿ ಬೆನ್ನಲ್ಲೇ ಬಹರೈನ್, ಕುವೈತ್ ನೆಲೆಗಳ ಮೇಲೆ ಇರಾನ್ ಪ್ರತಿದಾಳಿ

**ದುಬೈ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ ಬೆನ್ನಲ್ಲೇ,ಇಂದು ಮುಂಜಾನೆ ಇರಾನ್ ಮೇಲೆ ಎರಡನೇ ಸುತ್ತಿನ ವಾಯುದಾಳಿಗಳನ್ನು ನಡೆದಿದೆ. ಇದಕ್ಕೆ ಪ್ರತಿಯಾಗಿ ಇರಾನ್ ಸೇನೆ ಅಮೆ-ರಿಕ ನೆಲೆಗಳಿರುವ ಬಹರೈನ್, ಕುವೈತ್ ಮತ್ತು ಜೋರ್ಡನ್ ಮೇಲೆ ದಾಳಿಗಳನ್ನು ನಡೆಸಿದೆ.

ಯುದ್ಧ ಅಂತ್ಯಗೊಳಿಸುವ ನಿಟ್ಟಿನ ಮಾತುಕತೆಗಳು ಮತ್ತೆ ಸ್ಥಗಿ-ತಗೊಂಡಿರುವಂತೆಯೇ ಈ ಬೆಳವಣಿಗೆ ನಡೆದಿದೆ. ಮತ್ತೊಂದೆಡೆ, ಜಾಗತಿಕ ಇಂಧನ ಪೂರೈಕೆಗೆ ಮಹತ್ವದ ಮಾರ್ಗವಾಗಿರುವ ಹೋರ್ಮುಜ್ ಜಲಸಂಧಿಯ ಮೇಲಿನ ತನ್ನ ಹಿಡಿತವನ್ನು ಮುಂದುವರಿಸುವುದಾಗಿ ಇರಾನ್ ಪಟ್ಟು ಹಿಡಿದಿದ್ದು, ಇದರಿಂದ ತೈಲ ಬೆಲೆಗಳು ಮತ್ತಷ್ಟು ಏರಿಕೆಯಾಗಿವೆ. ಕಳೆದ ಎರಡು ತಿಂಗಳ ಅಸ್ಥಿರ ಕದನ ವಿರಾಮದ ಅವಧಿಯಲ್ಲಿ ಈ ವಾರ ಮೂರನೇ ಬಾರಿಗೆ ಉಭಯ ದೇಶಗಳ ನಡುವೆ ಪ್ರತಿದಾಳಿ ನಡೆದಂತಾಗಿದೆ.ಯುದ್ಧಕ್ಕೆ ಅಂತ್ಯ ಹಾಡುವ ಒಪ್ಪಂದಕ್ಕೆ ಸಹಿ ಹಾಕುವಂತೆ ಟ್ರಂಪ್ ಇರಾನ್‌ಗೆ ಒತ್ತಾಯಿಸಿದ್ದು, ಕೆಲವೇ ದಿನಗಳಲ್ಲಿ ಒಪ್ಪಂದ ಸಾಧ್ಯವಾಗಬಹುದು ಎಂಬ ಆಶಾವಾದವನ್ನೂ ವ್ಯಕ್ತಪಡಿಸಿದ್ದರು.

ಆದರೆ, ವಿಶ್ವಸಂಸ್ಥೆಯಲ್ಲಿನ ಇರಾನ್ ರಾಯಭಾರಿ ಅಮೀರ್ ಸಯೀದ್ ಇರವಾನಿ, ಬೆದರಿಕೆ ಮತ್ತು ಒತ್ತಡದ ನಡುವೆಯೇ ಇರಾನ್ ಎಂದಿಗೂ ಮಾತುಕತೆ ನಡೆಸಿಲ್ಲ. ಮುಂದೆಯೂ ಒತ್ತಡಕ್ಕೆ ಮಣಿಯುವುದಿಲ್ಲ ಎಂದು ಭದ್ರತಾ ಮಂಡಳಿಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಆದಾಗ್ಯೂ, ಉಭಯ ರಾಷ್ಟ್ರಗಳೂ ತಮ ಪಾಲಿಗೆ ಗೆಲುವಿನ ಚಿತ್ರಣ ನೀಡುವ




ರೀತಿಯಲ್ಲಿ ಸಂಘರ್ಷಕ್ಕೆ ತೆರೆ ಎಳೆಯುವ ಮಾರ್ಗವನ್ನು ಹುಡುಕುತ್ತಿರುವಂತೆ ಕಾಣುತ್ತಿದೆ. ಭಾರೀ ಬಾಂಬ್ ದಾಳಿಗಳ ನಡುವೆಯೂ ಇರಾನ್ ತನ್ನ ಸ್ಥೈರ್ಯವನ್ನು ಪ್ರದರ್ಶಿಸಿದೆ. ಜಾಗತಿಕ ತೈಲ ಮತ್ತು ನೈಸರ್ಗಿಕ ಅನಿಲ ಸಾಗಣೆಗೆ ಪ್ರಮುಖವಾಗಿರುವ ಹೋರ್ಮುಜ್ ಜಲಸಂಧಿಯನ್ನು ಪರಿಣಾಮಕಾರಿಯಾಗಿ ಮುಚ್ಚುವ ಸಾಮರ್ಥ್ಯವೇ ತನ್ನ ಪ್ರಮುಖ ಮಾತುಕತೆ ಅಸ್ತ್ರವೆಂದು ಅದು ನಂಬಿದೆ.

ಇದೇ ವೇಳೆ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಇರಾನ್‌ನ ಧಾರ್ಮಿಕ ಆಡಳಿತದ ಪತನ, ಅದರ ಅಣು ಕಾರ್ಯಕ್ರಮದ ಸಂಪೂರ್ಣ ನಿರ್ಮೂಲನೆ ಹಾಗೂ ಲೆಬನಾನ್‌ನ ಹಿಜ್ಬುಲ್ಲಾ ಸಂಘಟನೆಯ ನಾಶದಂತಹ ಗುರಿಗಳನ್ನು ಮುಂದುವ-ರಿಸುತ್ತಿರುವುದು ರಾಜಿ ಪ್ರಯತ್ನಗಳನ್ನು ಮತ್ತಷ್ಟು ಸಂಕೀರ್ಣಗೊಳಿಸಿದೆ. ಅಮೆರಿಕದ ಸೆಂಟ್ರಲ್ ಕಮಾಂಡ್, ಇರಾನ್‌ನ ವಿವಿಧ ನಗರಗಳ ಮೇಲೆ ನಡೆಸಿದ ಹೊಸ ವಾಯುದಾಳಿ ಕಾರ್ಯಾಚರಣೆ ಪೂರ್ಣಗೊಂಡಿದೆ ಎಂದು ತಿಳಿಸಿದೆ.ಇರಾನ್‌ನ ನಿರಂತರ ಮತ್ತು ಅನಗತ್ಯ ಆಕ್ರಮಣಗಳಿಗೆ ಪ್ರತಿಕ್ರಿಯೆಯಾಗಿ ಈ ದಾಳಿಗಳನ್ನು ನಡೆಸಲಾಗಿದೆ. ಇರಾನ್‌ನ ಸೇನಾ ನಿಗಾ ವ್ಯವಸ್ಥೆಗಳು, ಸಂವಹನ ಜಾಲ ಹಾಗೂ ವಾಯು ರಕ್ಷಣಾ ತಾಣಗಳನ್ನು ಗುರಿಯಾಗಿಸಲಾಗಿದೆ ಎಂದು ಅದು ಹೇಳಿದೆ.

ಈ ದಾಳಿಗಳ ಸ್ಫೋಟದ ಶಬ್ದಗಳು ಇರಾನ್ ರಾಜಧಾನಿ ತೆಹ್ರಾನ್ ಸೇರಿದಂತೆ ಹೋರ್ಮುಜ್ ಜಲಸಂಧಿಯ ಸಮೀಪದ ಬಂದರ್ ಅಬ್ಬಾಸ್ ಹಾಗೂ ದಕ್ಷಿಣ ಭಾಗದ ಹಲವು ಪ್ರದೇಶಗಳಲ್ಲಿ ಕೇಳಿಬಂದಿವೆ. ಇದಕ್ಕೆ ಪ್ರತಿಯಾಗಿ ಇರಾನ್ ಬಹರೈನ್, ಕುವೈತ್ ಮತ್ತು ಜೋರ್ಡನ್ ಮೇಲೆ ಕ್ಷಿಪಣಿ ದಾಳಿಗಳನ್ನು ನಡೆಸಿದೆ. ಕುವೈತ್ ತನ್ನ ವಾಯುಪ್ರದೇಶವನ್ನು ತಾತ್ಕಾಲಿಕವಾಗಿ ಮುಚ್ಚಿದ್ದು, ವಿಮಾನಗಳನ್ನು ಬೇರೆ ವಿಮಾನ ನಿಲ್ದಾಣಗಳಿಗೆ ತಿರುಗಿಸಲಾಗಿದೆ ಎಂದು ನಾಗರಿಕ ವಿಮಾನಯಾನ ನಿರ್ದೇಶನಾಲಯ ತಿಳಿಸಿದೆ. ಇರಾನ್‌ನ ದುಷ್ಕೃತ್ಯಪೂರ್ಣ ದಾಳಿಗಳು ಹಾಗೂ ನಾಗ-ರಿಕ ವಿಮಾನ ಸಂಚಾರಕ್ಕೆ ಉಂಟಾಗಬಹುದಾದ ಅಪಾಯವನ್ನು ಗಮನದಲ್ಲಿಟ್ಟುಕೊಂಡು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಕುವೈತ್ ಹೇಳಿದೆ. ಇತ್ತೀಚಿನ ದಿನಗಳಲ್ಲಿ ಕುವೈತ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೂ ಇರಾನ್ ದಾಳಿ ನಡೆಸಿದ್ದು, ಒಬ್ಬರು ಮೃತಪಟ್ಟರೆ ಹಲವರು ಗಾಯಗೊಂಡಿದ್ದರು.ಮುಂಜಾನೆ ಲೆಬನಾನ್‌ನಿಂದ ಕ್ಷಿಪಣಿ ಅಥವಾ ರಾಕೆಟ್ ದಾಳಿ ಸಂಭವಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಉತ್ತರ ಭಾಗದ ನಿವಾಸಿಗಳು ಸುರಕ್ಷಿತ ಆಶ್ರಯ ಪಡೆಯುವಂತೆ ಇಸ್ರೇಲ್ ಎಚ್ಚರಿಕೆ ನೀಡಿದೆ.

ಅದೇ ವೇಳೆ, ಜೋರ್ಡನ್‌ನಲ್ಲಿರುವ ಅಮೆರಿಕ ರಾಯಭಾರ ಕಚೇರಿ, ಜೋರ್ಡನ್ ವಾಯುಪ್ರದೇಶದಲ್ಲಿ ಕ್ಷಿಪಣಿ, ಡ್ರೋನ್ ಅಥವಾ ರಾಕೆಟ್‌ಗಳು ಸಂಚರಿಸುತ್ತಿರುವ ವರದಿಗಳಿವೆ ಎಂದು ಎಚ್ಚರಿಸಿದೆ.ಕಳೆದ ತಿಂಗಳಿಂದ ಅಮೆ-ರಿಕ ಸೇನೆ, ಇರಾನ್‌ನ ನಿಯಂತ್ರಣವನ್ನು ತಪ್ಪಿಸಿ ಹೋರ್ಮುಜ್ ಜಲಸಂಧಿ ಮೂಲಕ ತೈಲ ಸಾಗಣೆ ನಡೆಸಲು ರಹಸ್ಯ ಕಾರ್ಯಾಚರಣೆ ಕೈಗೊಂಡಿದೆ ಎಂದು ಟ್ರಂಪ್ ಹೇಳಿದ್ದಾರೆ.

ಇರಾನ್‌ನ ರಾಡಾರ್ ವ್ಯವಸ್ಥೆಗಳನ್ನು ನಾಶಪಡಿಸಿರುವ ಹಿನ್ನೆಲೆಯಲ್ಲಿ, ರಾತ್ರಿ ವೇಳೆ ಹಡಗುಗಳು ಸುರಕ್ಷಿತವಾಗಿ ಸಾಗುತ್ತಿವೆ ಎಂದು ಅವರು ತಿಳಿಸಿದ್ದಾರೆ.ಈ ಮೂಲಕ 100 ಮಿಲಿಯನ್ ಬ್ಯಾರೆಲ್‌ಗಿಂತ ಹೆಚ್ಚು ತೈಲವನ್ನು ಇರಾನ್‌ನ ನಿರ್ಬಂಧದಿಂದ ತಪ್ಪಿಸಿ ಸಾಗಿಸಲಾಗಿದೆ ಎಂದು ಟ್ರಂಪ್ ಹೇಳಿದ್ದಾರೆ. ಆದರೆ, ಈ ಅಂಕಿ-ಅಂಶಕ್ಕೆ ತಕ್ಷಣದ ಸ್ವತಂತ್ರ ದೃಢೀಕರಣ ಲಭ್ಯವಾಗಿಲ್ಲ. ಯುದ್ಧಕ್ಕೂ ಮುನ್ನ ಐದು ದಿನಗಳಲ್ಲಿ ಸಾಗಣೆಯಾಗುತ್ತಿದ್ದ ತೈಲದ ಪ್ರಮಾಣಕ್ಕೆ ಇದು ಸಮನಾಗಿದೆ.

# ಡ್ರಗ್ಸ್ ಹಾವಳಿ ನಿರ್ಮೂಲನೆಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನೀಲನಕ್ಷೆ

**ಬೆಂಗಳೂರು:** ಮಾದಕವಸ್ತು ಹಾವಳಿಯನ್ನು ಬೇರು ಸಮೇತ ಕಿತ್ತುಹಾಕಲು 8-10 ದಿನಗಳಲ್ಲಿ ನೀಲ ನಕ್ಷೆ ರೂಪಿಸಿ, ಅಧಿಕಾ-ರಿಗಳಿಗೆ ಜವಾಬ್ದಾರಿ ಹಂಚಿ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾದಕ ವ್ಯಸನ ಮುಕ್ತ ಕರ್ನಾಟಕ ಮಾಡುತ್ತೇವೆ ಎಂದು ಬಾಯಿ ಮಾತಿನಲ್ಲಿ ಮಾಧ್ಯಮಗಳ ಮುಂದೆ ಹೇಳಿದರೆ ಸಾಧ್ಯವಾಗುವುದಿಲ್ಲ, ಇದು ಸೂಕ್ಷ್ಮ ವಿಚಾರ. ನೀಲ ನಕ್ಷೆಯೊಂದಿಗೆ ಕೆಲಸ ಮಾಡಬೇಕಿದೆ ಎಂದರು.

ಮಾದಕ ವಸ್ತುಗಳು ಎಲ್ಲಿಂದ, ಹೇಗೆ ಬರುತ್ತಿವೆ? ಅವುಗಳ ಹಿಂದಿರುವ ಹಣ-ಕಾಸಿನ ವ್ಯವಹಾರಗಳು, ಡ್ರಗ್ ಪೆಡ್ಲರ್‌ಗಳು, ಅಂತಾರಾಷ್ಟ್ರೀಯ ವಿದ್ಯಮಾನಗಳು, ರಾಷ್ಟ್ರ-ಅಂತಾರಾಷ್ಟ್ರದ ಜೊತೆಗೆ ರಾಜ್ಯದಲ್ಲಿ ಎಲ್ಲೆಲ್ಲಿ ಮಾದಕವಸ್ತು ಹಾವಳಿ ಇದೆ ಎಂಬುದನ್ನು ಪರಿಶೀಲಿಸಬೇಕಿದೆ ಎಂದರು. ಬೆಂಗಳೂ-ರಿಗೆ ಸೀಮಿತವಾಗಿ ಡ್ರಗ್ಸ್ ವ್ಯವಹಾರ ನಡೆಯುವುದಿಲ್ಲ. ಹುಬ್ಬಳ್ಳಿ, ಬೆಳಗಾವಿ, ಕಲಬುರಗಿ ಜಿಲ್ಲೆಗಳಲ್ಲೂ ನೆಟ್‌ವರ್ಕ್‌ಗಳಿವೆ. ಅಂತಾರಾಷ್ಟ್ರೀಯ ಮೂಲದಿಂದ ಸರಬರಾಜು ಆಗುತ್ತಿದೆ. ಇದನ್ನೆಲ್ಲಾ ತಿಳಿದುಕೊಂಡು ಬೇರು ಸಹಿತ ಕಿತ್ತುಹಾಕಲು ಒಗ್ಗಟ್ಟಿನಿಂದ ಕೆಲಸ ಮಾಡಬೇಕಿದೆ ಎಂದರು.

ಗೃಹ ಇಲಾಖೆಯೊಂದರಿಂದಲೇ ಇದು ಸಾಧ್ಯವಾಗುವುದಿಲ್ಲ, ಸಾರ್ವಜನಿಕರು, ಸಂಘ ಸಂಸ್ಥೆಗಳು ಮಾಹಿತಿ ನೀಡಬೇಕು. ಎನ್‌ಜಿಓಗಳು ಕೈ ಜೋಡಿಸಬೇಕು ಇದು ನಿರಂತರವಾದ ಪ್ರಕ್ರಿಯೆ ಎಂದರು. ಡ್ರಗ್ಸ್ ಮುಂದ್ರಾಪೋರ್ಟ್‌ನಿಂದ ಹೆಚ್ಚಾಗಿ ಕಳ್ಳ ಮಾರ್ಗದ ಮೂಲಕ ಆಗಮಿಸುತ್ತಿರುವುದು ಗೊತ್ತಿದೆ. ಆ ಬಂದರು ಯಾರಿಗೆ ಸೇರಿದ್ದು? ಕೇಂದ್ರ ಗೃಹಸಚಿವರಿಗೆ ಇದೆಲ್ಲಾ ಗೊತ್ತಿಲ್ಲವೇ? ಮಾದಕ ವಸ್ತುಗಳ ಕಳ್ಳ ಸಾಗಾಣಿಕೆ ವಿರುದ್ಧ ಜಂಟಿಯಾಗಿ ಕಾರ್ಯಾಚರಣೆ ಕೈಗೊಂಡರೆ ಯಶಸ್ಸು ಸಾಧಿಸಲು ಸಾಧ್ಯ. ಈ ವಿಷಯವಾಗಿ ಎಲ್ಲರೂ ಕೈ ಜೋಡಿಸಬೇಕು ಎಂದು ಹೇಳಿದರು.

ವಿರೋಧ ಪಕ್ಷದ ನಾಯಕರು ಕಸ ವಿಲೇವಾರಿ ಟೆಂಡರ್‌ನಲ್ಲಿ 10 ಸಾವಿರ ಕೋಟಿ ರೂ. ಅವ್ಯವಹಾರವಾಗಿದೆ ಎಂದು ಆರೋಪಿಸಿದ್ದಾರೆ. ಜನರಿಗೆ ಈ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು. ಮುಖ್ಯಮಂತ್ರಿಯವರು



ಯಾವುದೇ ರೀತಿಯ ತನಿಖೆಗಾದರೂ ಸಿದ್ಧ ಎಂದು ಹೇಳಿದ್ದಾರೆ. ಅಶೋಕ್ ಅವರು ಸೂಕ್ತ ದಾಖಲೆ ಇದ್ದರೆ, ಮಾಧ್ಯಮಗಳ ಮೂಲಕ ಸ್ಪಷ್ಟವಾಗಿ ಹೇಳಬಹುದಿತ್ತು. ಕಸದ ಮಾಫಿಯಾವನ್ನು ಉಳಿಸಿ, ಬೆಳೆಸಿದ್ದು, ಬಿಜೆಪಿಯವರು. ಇನ್ನೂ ಟೆಂಡರ್ ಆಗಿಲ್ಲ, ಆಗಲೇ ಆರೋಪ ಮಾಡುತ್ತಿದ್ದಾರೆ. ಅಶೋಕ್ ಅವರು ಬೆಂಗಳೂರು ಉಸ್ತುವಾರಿಯಾಗಿದ್ದಾಗ ಏನು ಮಾಡಿದ್ದರು?. ಅವರು ಮಾಡಿದ ಗಂಟುಗಳನ್ನು ಬಿಚ್ಚುತ್ತಾ ಹೋದರೆ ಎಲ್ಲವೂ ಹೊರಗೆ ಬರುತ್ತದೆ ಎಂದು ಎಚ್ಚರಿಸಿದರು.

ಬಿಡದಿ ಪ್ರಕರಣದಲ್ಲಿ ರೈತರ ವಿರುದ್ಧ ತಪ್ಪಾಗಿ ಎಫ್‌ಐಆರ್ ದಾಖಲಿಸಿದ್ದರೆ, ಅದನ್ನು ಹಿಂಪಡೆಯಲು ನಮ ಸರ್ಕಾರ ಸಿದ್ಧವಿದೆ. ಬಿಡದಿ ಬಳಿ ರೈತರ ಇಚ್ಛೆಗೆ ವಿರುದ್ಧವಾಗಿ ಭೂ ಸ್ವಾಧೀನ ಮಾಡಿಕೊಳ್ಳುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.ನಮ ಸರ್ಕಾರ ಎಲ್ಲಾ ಸಮುದಾಯಗಳಿಗೂ ಸಮಾನ ಅವಕಾಶಗಳನ್ನು ನೀಡುತ್ತದೆ. ಒಂದು ವೇಳೆ ತಾರತಮ್ಯವಾಗಿದ್ದರೆ ಅದನ್ನು ಸರಿಪಡಿಸುತ್ತೇವೆ ಎಂದರು.

# ಬೆಳ್ಳಂಬೆಳಗ್ಗೆ ಬೆಂಗಳೂರಲ್ಲಿ ಪೊಲೀಸರ ಪಿಸ್ತೂಲ್ ಸದ್ದು : ದರೋಡೆಕೋರನಿಗೆ ಗುಂಡೇಟು

**ಬೆಂಗಳೂರು:** ನಗರದಲ್ಲಿ ಇತ್ತೀಚೆಗೆ ತಣ್ಣಗಾಗಿದ್ದ ಪೊಲೀಸರ ಪಿಸ್ತೂಲ್ ಇಂದು ಮತ್ತೆ ಸದ್ದು ಮಾಡಿದೆ. ದರೋಡೆಕೋರನನ್ನು ಬಂಧಿಸಲು ಹೋದ ಪೊಲೀಸರ ಮೇಲೆಯೇ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ ಆರೋಪಿ ಪೊಲೀಸರ ಗುಂಡೇಟಿನಿಂದ ಗಾಯಗೊಂಡು ಸಿಕ್ಕಿ ಬಿದ್ದಿದ್ದಾನೆ.

ಆನೇಕಲ್ ತಾಲ್ಲೂಕಿನ ಜಿಗಣಿ ಹೋಬಳಿ ಆಶ್ರಯ ಲೇಔಟ್ ನಿವಾಸಿ ಜೀವಾ (20) ಗುಂಡೇಟಿನಿಂದ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಈತ ಮೂಲತಃ ತಮಿಳುನಾಡಿನವನು.ಕಳೆದ ವಾರ ಜೀವಾ ತನ್ನ ಸಹಚರರೊಂದಿಗೆ ಸೇರಿಕೊಂಡು ಹೆಬ್ಬಗೋಡಿ ಹಾಗೂ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲಿ ದರೋಡೆ ಮಾಡಿ ಪರಾರಿಯಾಗಿದ್ದನು. ಪ್ರಕರಣ ದಾಖಲಿಸಿಕೊಂಡಿರುವ ಹೆಬ್ಬೋಡಿ ಠಾಣೆ ಪೊಲೀಸರು ಆರೋಪಿ ಜೀವಾನಿಗಾಗಿ ಹುಡುಕಾಟ ನಡೆಸುತ್ತಿದ್ದರು. ಆತ ತಮಿಳುನಾಡಿನಲ್ಲಿರುವ ಬಗ್ಗೆ



ಪೊಲೀಸರಿಗೆ ಮಾಹಿತಿ ಲಭ್ಯವಾಗಿದ್ದು, ಅಲ್ಲಿಗೆ ಒಂದು ತಂಡ ತೆರಳಿತ್ತು.ಪೊಲೀಸರು ತಮಿಳುನಾಡಿಗೆ ಬಂದು ತನ್ನನ್ನು ಬಂಧಿಸುತ್ತಾರೆಂದು ತಿಳಿದು ಆರೋಪಿ ಜೀವಾ ವಾಪಸ್ ನಗರಕ್ಕೆ ಬಂದು ಸಿಂಗೇನಾಅಗ್ರಹಾರ ಗ್ರಾಮದ ಹೊರವಲಯದಲ್ಲಿನ ಜಮೀನಿನಲ್ಲಿ ಬೆಳೆದಿರುವ ನೀಲಗಿರಿ ತೋಪಿನಲ್ಲಿ ರಾತ್ರಿ ಅಡಗಿ ಕುಳಿತಿದ್ದನು. ಆತನನ್ನು ಹುಡುಕಾಟ ನಡೆಸುತ್ತಿದ್ದ ಪೊಲೀಸರಿಗೆ ಈ ಬಗ್ಗೆ ಮಾಹಿತಿ ಲಭಿಸಿದೆ. ತಕ್ಷಣ ಕಾರ್ಯಪ್ರವೃತ್ತರಾದ ಹೆಬ್ಬಗೋಡಿ ಠಾಣೆ ಸಬ್‌ಇನ್?ಸಪೆಕ್ಟರ್ ಅಯ್ಯಪ್ಪ ಹಾಗೂ ಕಾನ್‌ಸ್ಟೇಬಲ್ ನಾಗೇಶ್ ಹಾಗೂ ಇತರರೊಂದಿಗೆ ಇಂದು ಬೆಳಗಿನ ಜಾವ 1.30ರ ಸುಮಾರಿಗೆ ಸಿಂಗೇನಾಅಗ್ರಹಾರ ತೋಪಿನ ಬಳಿ ಹೋಗಿದ್ದಾರೆ. ಪೊಲೀಸರನ್ನು ಗಮನಿಸಿದ ದರೋಡೆಕೋರ ಜೀವಾ ಏಕಾಏಕಿ ಚಾಕುವಿನಿಂದ ಪೊಲೀಸರ ಮೇಲೆಯೇ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ್ದಾನೆ.ತಕ್ಷಣ ಸಬ್‌ಇನ್?ಸಪೆಕ್ಟರ್ ಅಯ್ಯಪ್ಪ ಅವರು ತಮ ಸರ್ವಿಸ್ ಪಿಸ್ತೂಲ್‌ನಿಂದ ಗಾಳಿಯಲ್ಲಿ ಒಂದು ಸುತ್ತು ಗುಂಡು ಹಾರಿಸಿ ಶರಣಾಗುವಂತೆ ಎಚ್ಚರಿಕೆ ನೀಡಿದ್ದಾರೆ.

ಪೊಲೀಸರ ಮಾತಿಗೆ ಕಿವಿಗೊಡದೆ ಮತ್ತೆ ಚಾಕುವಿನಿಂದ ಕಾನ್ಸ್ ಸ್ಟೇಬಲ್ ನಾಗೇಶ್ ಅವರ ಮೇಲೆ ಹಲ್ಲೆ ನಡೆಸಿದಾಗ ಆತರಕ್ಷಣೆಗಾಗಿ ಸಬ್‌ಇನ್ಸ್‌ಪೆಕ್ಟರ್ ಆರಿಸಿದ ಗುಂಡು ದರೋಡೆಕೋರನ ಬಲಗಾಲಿಗೆ ತಗುಲಿದ್ದು, ಸ್ಥಳದಲ್ಲೇ ಕುಸಿದು ಬಿದ್ದಿದ್ದಾನೆ. ತಕ್ಷಣ ಪೊಲೀಸರು ಆತನನ್ನು ಸುತ್ತುವರೆದು ವಶಕ್ಕೆ ಪಡೆದು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಕಾರ್ಯಾಚರಣೆ ವೇಳೆ ಗಾಯಗೊಂಡಿರುವ ಕಾನ್ಸ್ ಸ್ಟೇಬಲ್ ನಾಗೇಶ್ ಅವರು ಆಸ್ಪತ್ರೆಗೆ ದಾಖಲಾಗಿದ್ದಾರೆ.ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಕೊಲೆ,ದರೋಡೆ ಸೇ-ರಿದಂತೆ ನಾಲ್ಕು ಪ್ರಕರಣಗಳು, ಸೂರ್ಯಸಿಟಿ ಪೊಲೀಸ್ ಠಾಣೆಯಲ್ಲಿ ಡಕಾಯಿತಿ ಪ್ರಕರಣ ಹಾಗೂ ಎಲೆಕ್ಟ್ರಾನಿಕ್ ಸಿಟಿ ಠಾಣೆಯಲ್ಲಿ ಅಪಹರಣ, ದರೋಡೆ ಪ್ರಕರಣ ಮತ್ತು ತಮಿಳುನಾಡಿನ ವೆಟಮೆಲಮ್ ಠಾಣೆಯಲ್ಲಿ ಹಲ್ಲೆ ಪ್ರಕರಣ ದಾಖಲಾಗಿವೆ. ಆರೋಪಿ ಅಪ್ರಾಪ್ತನಾಗಿರುವುದ-ರಿಂದ ರೌಡಿ ಶೀಟರ್ ಹಾಕಿರಲಿಲ್ಲ. ಇದೀಗ ಆತನ ಮೇಲೆ ರೌಡಿ ಪಟ್ಟಿ ತೆರೆಯಲಾಗುವುದೆಂದು ಹಿರಿಯ ಪೊಲೀಸ್ ಅಧಿಕಾರಿಗಳು ಈ ಸಂಜೆಗೆ ತಿಳಿಸಿದ್ದಾರೆ.

# ಕೊಲ್ಲೂರು ಮೂಕಾಂಬಿಕೆಗೆ ವಿಶೇಷ ಪೂಜೆ ಸಲ್ಲಿಸಿ, ಬೆಳ್ಳಿಯ ಖಡ್ಗ ಅರ್ಪಿಸಿದ ತಮಿಳುನಾಡು ಸಿಎಂ ಜೋಸೆಫ್ ವಿಜಯ್

ಉಡುಪಿ:ತಮಿಳುನಾಡು ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ಅವರು ಇಂದು ಕೊಲ್ಲೂರಿನ ಶ್ರೀ ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ, ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ದೇವಿಗೆ ಭಕ್ತಿಪೂರ್ವಕವಾಗಿ ಬೆಳ್ಳಿಯ ಖಡ್ಗ ಅರ್ಪಿಸಿದರು.

ಇದಕ್ಕೂ ಮುನ್ನ, ಮಂಗಳೂರು ವಿಮಾನ ನಿಲ್ದಾಣಕ್ಕೆ ಆಗಮಿಸಿದ ಸಿಎಂ, ಅಲ್ಲಿಂದ ರಸ್ತೆ ಮಾರ್ಗವಾಗಿ ಕೊಲ್ಲೂ-ರಿಗೆ ಪಯಣ ಬೆಳೆಸಿದ್ದರು. ದೇವಸ್ಥಾನಕ್ಕೆ ಆಗಮಿಸಿದ ಅವರನ್ನು ದೇವಸ್ಥಾನದ ವ್ಯವಸ್ಥಾಪನ ಮಂಡಳಿಯ ಪದಾಧಿಕಾ-ರಿಗಳು ಆತ್ಮೀಯವಾಗಿ ಸ್ವಾಗತಿಸಿದರು. ವಿಜಯ್ ಅವರನ್ನು ನೋಡಲು ನೂರಾರು ಸಂಖ್ಯೆಯಲ್ಲಿ ಅಭಿಮಾನಿಗಳು ದೇವಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಸೇರಿದ್ದರು. ವಿಜಯ್ ದೇಗುಲದಿಂದ ಹೊರಬರುತ್ತಿದ್ದಂತೆ ಜೈಕಾರ ಕೂಗಿ ಸಂಭ್ರಮಿಸಿದರು. ಸಿಎಂ ಅಭಿಮಾನಿಗಳತ್ತ ತೆರಳಿ ಶುಭಾಶಯ ವಿನಿಮಯ ಮಾಡಿಕೊಂಡರು. ದೇವರ ದರ್ಶನದ ವೇಳೆ ಭಕ್ತರ ಸಂಚಾರವನ್ನು ನಿಯಂತ್ರಿಸಿ ಅಗತ್ಯ ವ್ಯವಸ್ಥೆ ಮಾಡಲಾಗಿತ್ತು.

ವಿಜಯ್ ಭೇಟಿಯ ಹಿನ್ನೆಲೆಯಲ್ಲಿ ದೇವಸ್ಥಾನದ ಪರಿಸರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಭದ್ರತಾ ದೃಷ್ಟಿಯಿಂದ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ದೇವಸ್ಥಾನಕ್ಕೆ ಆಗಮಿಸುವ ಮಾರ್ಗಗಳಲ್ಲಿಯೂ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿತ್ತು. ದೇವಸ್ಥಾನದ ಆವರಣದಲ್ಲಿ ನೂರಾರು



ಸಂಖ್ಯೆಯಲ್ಲಿ ಅಭಿಮಾನಿಗಳು ನೆರೆದಿದ್ದರು. ಸಿಎಂ ವಿಜಯ್ ಅವರನ್ನು ಕಂಡು ಅವರು ಸಂಭ್ರಮಿಸಿದರು.

# ಉಪವಾಸವೇ ದೊಡ್ಡ ಚಿಕಿತ್ಸೆ

ಮನುಷ್ಯ ತಿಂಗಳಿಗೊಮ್ಮೆ, ಎರಡು ಬಾರಿ ಸಂಪೂರ್ಣ ನಿರಾಹಾರನಾಗಿರಲು ಕಲಿತರೆ ಅನಾರೋಗ್ಯದ ನಿಮಿತ್ತ ವೈದ್ಯರ ಬಳಿ ಹೋಗಬೇಕಾದ ಅಗತ್ಯವಿಲ್ಲ ನಮ್ಮ ಆಯುರ್ವೇದವೂ ಎಲ್ಲ ರೋಗಗಳಿಗೂ ಅಜೀರ್ಣವೇ ಕಾರಣ ಎನ್ನುತ್ತದೆ: "ಅಜೀರ್ಣಪ್ರಭಾವಾ ರೋಗಾಃ."

ಹೊಟ್ಟೆಕೆಟ್ಟು ಜೀರ್ಣಶಕ್ತಿ ಕಡಿಮೆಯಾದಾಗ ಎಲ್ಲ ರೋಗಗಳೂ ದಾಳಿ ಮಾಡುತ್ತವೆ. ಉಂಡದ್ದೆಲ್ಲ ಕರಗುತ್ತಿರುವ ತನಕ ಯಾವ ರೋಗವೂ ಬರುವುದಿಲ್ಲ. ಹೊಟ್ಟೆ ಹಾಳಾದಾಗ ದೇಹವೂ ಹಾಳಾಗುತ್ತದೆ. ಹೊಟ್ಟೆ ಹಾಳಾಗದಂತೆ ಕಾಪಾಡುವ ವಿಧಾನ ಅದಕ್ಕೆ ಪೂರ್ಣ ವಿಶ್ರಾಂತಿ. ಮಲಗಿದಾಗ ಕಣ್ಣಿಗೆ, ಕಿವಿಗೆ, ಇತರ ಇಂದ್ರಿಯಗಳಿಗೆ ವಿಶ್ರಾಂತಿ. ಬೆಳಗ್ಗಿನಿಂದ ರಾತ್ರಿಯ ತನಕವೂ ತಿನ್ನುತ್ತಲೇ ಇದ್ದರೆ, ತಿಂದದ್ದನ್ನು ಬೆಳಗಿನ ತನಕ ಜೀರ್ಣಿಸಿಕೊಳ್ಳಲೂ ಅವಕಾಶ ನೀಡದೆ ಇದ್ದರೆ ಪಚನೇಂದ್ರಿಯಕ್ಕೆ ವಿಶ್ರಾಂತಿಯೇ ಇಲ್ಲ. ಅದು ಸೋತು ಕೈಕಟ್ಟಿ ಕೂತಿತು ಎಂದರೆ ಅಜೀರ್ಣ. ಹಾಗಾಗಿ 15ದಿನಗಳಿಗೊಮ್ಮೆ 24 ಗಂಟೆಗಳ ಕಾಲ ಪೂರ್ಣ ವಿಶ್ರಾಂತಿ ದೊರಕಿತೆಂದರೆ ಈ ಪಚನೇಂದ್ರಿಯ ಮತ್ತೆ ದಕ್ಷವಾಗಿ ಕೆಲಸ ಮಾಡಲು ಸಿದ್ಧವಾಗುತ್ತದೆ.

ಈ ಎಲ್ಲ ದೃಷ್ಟಿಯಿಂದ ಏಕಾದಶಿ ತುಂಬ ಮಹತ್ವದ ದಿನ. ಅಂದು ವಾತಾವರಣದಲ್ಲಿ ಕೂಡ ಒಂದು ವಿಶಿಷ್ಟ ಶಕ್ತಿ ತುಂಬಿರುತ್ತದೆ. ಏಕಾದಶಿಯನ್ನು 'ಹರಿದಿನ' ಎಂದು ಕರೆಯುತ್ತಾರೆ. ಅಂದು ವೈಷ್ಣವೀಶಕ್ತಿ ಜಾಗೃತವಾಗಿ ಕೆಲಸ ಮಾಡುತ್ತದೆ ಎನ್ನುವುದು ತಾತ್ಪರ್ಯ. ಏಕಾದಶಿ ದಿನ ಆಹಾರತ್ಯಾಗ ಮಾಡಬೇಕು. ಆದರೆ ಮನಸ್ಸಿಗೆ ಹೆಚ್ಚು ಆಹಾರ ಕೊಡಬೇಕು. ಹೊಟ್ಟೆ ತುಂಬಿದರೆ ಬುದ್ಧಿ ಕೆಲಸ ಮಾಡೋದಿಲ್ಲ. ಹೀಗೆ ದೇಹ-ಬುದ್ಧಿ ಎರಡನ್ನೂ ಸಮತೋಲನದಲ್ಲಿಡಬೇಕಾಗುತ್ತದೆ. ಆಹಾರವನ್ನು ವರ್ಜಿಸುವುದು ಎಂದರೆ ಬುದ್ಧಿಯನ್ನು ಶುದ್ಧೀಕರಿಸುವುದು, ಚುರುಕುಗೊಳಿಸುವುದು ಎಂದೇ ಅರ್ಥ. ಪ್ರತಿಪಕ್ಷದ ಹನ್ನೊಂದನೆಯ ದಿನ ಇಂಥ ಉಪವಾಸವನ್ನು ಆಚರಿಸುತ್ತಾರೆ. ಇಂಥ ಉಪವಾಸದೀಕ್ಷೆಯ ಮಹತ್ವದ ಬಗೆಗೆ ಪುರಾಣಗಳಲ್ಲಿ ಅನೇಕ ಕಥೆಗಳಿವೆ. ಅಂಬರೀಷ ಇಂಥ ಏಕಾದಶಿ ದೀಕ್ಷಿತರಲ್ಲಿ ಒಬ್ಬ.

ಏಕಾದಶಿಯ ದಿನ ಶುದ್ಧನಾಗಿ ನಿರಾಹಾರದಿಂದಿದ್ದು, ದ್ವಾದಶಿಯಂದು ಬೆಳಿಗ್ಗೆದ್ದು ದೇವರ ಪೂಜೆ ಮಾಡಿ ತೀರ್ಥ ಸ್ವೀಕರಿಸಿ ಆಹಾರ ಸೇವಿಸುವುದು ಅವನ ದೀಕ್ಷೆ. ಇಂಥ ಒಂದು ಘಟನೆಯ ಮೂಲಕ ಅಂಬರೀಷನ ಉಪವಾಸದ ಮಹತ್ವ, ಭಗವದ್ ಭಕ್ತಿಯ ಮಹತ್ವ ಇವೆರಡನ್ನೂ ಶುಕಾಚಾರ್ಯರು ಭಾಗವತದಲ್ಲಿ ವಿವರಿಸಿದ್ದಾರೆ. ಒಂದು ಏಕಾದಶಿ. ಅಂಬರೀಷ ಉಪವಾಸವನ್ನಾಚರಿಸಿ ಮರುದಿನ ಬೆಳಗ್ಗೆದ್ದು ಮುಹೂರ್ತ ದಾಟುವುದರೊಳಗೆ ಪಾರಣೆ ಮಾಡಬೇಕು ಎನ್ನುವಷ್ಟರಲ್ಲಿ ದೂರ್ವಾಸರು ಅತ್ತ ಬಂದರು. ಅಂಬರೀಷ ಅವರನ್ನೂ ಪಾರಣೆಗೆ ಆಹ್ವಾನಿಸಿದ. ದುರ್ವಾಸರು ಮಹಾ ಕೋಪಿಷ್ಠ. "ಸ್ವಲ್ಪ ಕಾದಿರು, ಸ್ನಾನ ಮಾಡಿ ಬರುತ್ತೇನೆ," ಎಂದು ಹೊರಟು ಹೋದರು.



ದುರ್ವಾಸರು ಇವನ ವ್ರತನಿಷ್ಠೆಯನ್ನು ಪರೀಕ್ಷಿಸಲೆಂದೇ ಬಂದವರು. ಅವರ ಕೋಪವೂ ಒಂದು ಅನುಗ್ರಹವೇ. ಮಕ್ಕಳು, ತಪ್ಪು ಮಾಡಿದಾಗ ದೊಡ್ಡವರು ಶಿಕ್ಷೆ ಕೊಡುವುದಿದೆ. ಅದು ಶಿಕ್ಷೆ ಅಲ್ಲ; ಶಿಕ್ಷಣ. ದುರ್ವಾಸರದೂ ಹಾಗೆಯೆ. ಭಕ್ತರ ಶಿಕ್ಷಣಕ್ಕಾಗಿ ಅವರದೊಂದು ನಾಟಕ. ಇನ್ನೇನು ಪಾರಣದ ಮುಹೂರ್ತ ದಾಟುತ್ತದೆ. ಆದರೆ ದುರ್ವಾಸರ ಸುಳಿವಿಲ್ಲ. ಬಂದ ಅತಿಥಿಗೆ ಅಪಚಾರವಾಗಬಾರದು; ತನ್ನ ವ್ರತಕ್ಕೂ ಭಂಗ ಬರಬಾರದು. ಹೇಗೆ ನಡೆದುಕೊಳ್ಳಬೇಕು ಎನ್ನುವುದು ಸಮಸ್ಯೆ. ಅಂಬರೀಷನಿಗೆ ಉಭಯಸಂಕಟ.

ಹೊತ್ತು ಮೀರಿದರೆ ಏನು ಮಾಡುವುದು? ವ್ರತಲೋಪವಾಗಬಾರದಲ್ಲ? ಅಂಬರೀಷ ಈ ಸಮಸ್ಯೆಗೆ ಒಂದು ತಾತ್ಕಾಲಿಕ ಪರಿಹಾರ ಕೊಂಡುಕೊಂಡ. ಪಾರಣದ ಸಮಯ ಮೀರುವ ಮುನ್ನ ಊಟದ ಬದಲು ನೀರು ಕುಡಿದು ಬಿಡುವುದು. ನೀರು ಕುಡಿದರೆ ಊಟದ ಫಲವೂ ಆಯಿತು. ಉಪವಾಸದ ಫಲವೂ ಆಯಿತು. ಶಾಸ್ತ್ರಕಾರರು ನೀರನ್ನು ಆಹಾರದ ಪ್ರತಿನಿಧಿಯೂ ಹೌದು, ಉಪವಾಸದ ಪ್ರತಿನಿಧಿಯೂ ಹೌದು ಎಂದು ಒಪ್ಪಿಕೊಂಡಿದ್ದಾರೆ. ನಮ್ಮ ವೈದ್ಯಪದ್ಧತಿಗಳೂ ಇದನ್ನು ಅನುಮೋದಿಸಿವೆ.

ಹೀಗೆ ಯೋಚಿಸಿ ಅಂಬರೀಷ ಮಹಾರಾಜ ನೀರು ಕುಡಿದ. ಅಷ್ಟರಲ್ಲಿ ದುರ್ವಾಸರು ಬಂದರು. ವಿಷಯ ತಿಳಿದು ಸಿಟ್ಟುಗೊಂಡರು" "ನೀನು ಅತಿಥಿಗೆ ಅಪಚಾರ ಮಾಡಿದ್ದೀಯ, ನೀನು ಮೋಸಗಾರ, ನಿನಗೆ ಶಾಪ ಕೊಡುತ್ತೇನೆ," ಎಂದು ಗುಡುಗಿದರು. ಕೃತ್ಯೆಯನ್ನು ಅಭಿಮಂತ್ರಿಸಿ ಅವನ ಮೇಲೆ ಛೂಬಿಟ್ಟರು. ಅಂಬರೀಷ ಮಹಾಭಗವದ್ ಭಕ್ತ. ಆತ ಭಗವಂತನಿಗೆ ಮೊರೆಹೊಕ್ಕ. ವಿಷ್ಣು ತನ್ನ ಭಕ್ತನ ರಕ್ಷಣೆಗಾಗಿ ಚಕ್ರವನ್ನು ಕಳುಹಿಸಿದ.

ದುರ್ವಾಸರ ಮಂತ್ರ ತಿರುಮಂತ್ರವಾಯಿತು. ವಿಷ್ಣುಚಕ್ರಕ್ಕೆ ಹೆದರಿದ ಕೃತ್ಯೆ ದುರ್ವಾಸರನ್ನೆ ಬೆನ್ನಟ್ಟಿತು. ಇದರಿಂದ ತಪ್ಪಿಸಿಕೊಳ್ಳಲು ದುರ್ವಾಸರು ಬ್ರಹ್ಮನಿಗೆ ಶರಣಾದರು. ತನ್ನನ್ನು ವಿಷ್ಣುಚಕ್ರದಿಂದ ಪಾರುಮಾಡಬೇಕೆಂದು ಪ್ರಾರ್ಥಿಸಿದರು. ಆಗ ಬ್ರಹ್ಮದೇವ ಹೇಳಿದ ಮಾತು: "ನಾರಾಯಣ ಜಗತ್ತಿನ ನಿಯಮಾಶಕ್ತಿ. ಅವನ ಆಜ್ಞೆಯಂತೆ ಚಲಿಸುವ ಭಕ್ತರು ನಾವು. ವಿಷ್ಣುಭಕ್ತನನ್ನು ತಡೆಯುವ ಶಕ್ತಿ ನಮಗಿಲ್ಲ. ನಾನು, ರುದ್ರಾದಿ ಸಮಸ್ತ ದೇವತೆಗಳು ಅವನ ಆಜ್ಞೆಯನ್ನು ತಲೆಯಲ್ಲಿ ಹೊತ್ತು ಬದುಕುವವರು. ಆ ಆಜ್ಞೆಯನ್ನು ಮೀರಿ ನಡೆಯುವ ಶಕ್ತಿ ಯಾರಿಗೂ ಇಲ್ಲ."

ದುರ್ವಾಸರು ರುದ್ರನಲ್ಲಿಗೆ ಹೋಗಿ ಬೇಡಿದರು. ವಾಸ್ತವವಾಗಿ ದುರ್ವಾಸರು ಸ್ವಯಂ ರುದ್ರಾಂಶಸಂಭೂತರು. ಇದೆಲ್ಲ ಅಂಬರೀಷನ ಭಗವದ್ ಭಕ್ತಿಯ ಯೋಗ್ಯತೆಯ ಆಳವನ್ನು ಪರೀಕ್ಷಿಸಲು ದೊಡ್ಡವರು ಮಾಡಿದ ಒಂದು ನಾಟಕ. ಅದರಲ್ಲಿ ದುರ್ವಾಸರಿಗೆ ದ್ವಿಪಾತ್ರಾಭಿನಯ. ರುದ್ರದೇವರಿಂದಲೂ ನಿರಾಸೆಯ ಉತ್ತರವೆ ಬಂತು, "ಇಂಥ ಬ್ರಹ್ಮಾಂಡಗಳು ಎಷ್ಟೋ ಬಾರಿ ಸೃಷ್ಠಿಯಾಗಿವೆ; ನಾಶವಾಗಿವೆ. ಬ್ರಹ್ಮಾಂಡದಲ್ಲಿ ನೂರಾರು ಬಾರಿ ಸತ್ತು ಹುಟ್ಟುವ ಜೀವಗಳು ನಾವು. ಭಗವಂತನ ಲೀಲಾನಾಟಕದಲ್ಲಿ ನಾವೂ ಚಿಕ್ಕ ಪಾತ್ರಧಾರಿಗಳು. ಅವನು ಸೂತ್ರಧಾರ. ಅವನ ಆಜ್ಞೆಯನ್ನು ಮೀರಿ ನಾವೇನೋ ಮಾಡಲು ಸಾಧ್ಯವಿಲ್ಲ. ಆದ್ದರಿಂದ ನಿನಗೆ ರಕ್ಷೆ ಬೇಕಿದ್ದರೆ ವಿಷ್ಣುವಿಗೇ ಶರಣಾಗು. ಅವನು ನಿನ್ನನ್ನು ಕಾಪಾಡುತ್ತಾನೆ." ದುರ್ವಾಸರು ನೇರ ವಿಷ್ಣುವಿನ ಬಳಿಗೆ ಬಂದರು. "ನಿನ್ನ ಚಕ್ರದಿಂದ ನನ್ನನ್ನು ಪಾರುಮಾಡು," ಎಂದು ಪ್ರಾರ್ಥಿಸಿಕೊಂಡರು. ಆಗ ವಿಷ್ಣು ಹೇಳಿದ: "ನನ್ನಿಂದಲೂ ಸಾಧ್ಯವಿಲ್ಲ. ಏಕೆಂದರೆ, ನಾನು ಭಕ್ತರ ಪರಾಧೀನ. ನಾನೂ ಅವರ ಮಾತನ್ನು ಮೀರಲಾರೆ. ನಾನೆಂದರೆ ಅವರಿಗೆ ಮೆಚ್ಚು. ಅವರೆಂದರೆ ನನಗೆ ಮೆಚ್ಚು. ನಮ್ಮಿಬ್ಬರ ಹೃದಯವೂ ಒಂದೇ. ಅಂಬರೀಷ ನನ್ನ ಮಹಾಭಕ್ತ. ನನ್ನನ್ನು ಬಿಟ್ಟು ಇನ್ನೊಬ್ಬರನ್ನು ಸ್ಮರಿಸಿದವನಲ್ಲ. ನಾನೂ ಅವನನ್ನು ಬಿಟ್ಟು ಕೊಡಲಾರೆ. ಭಕ್ತರ ಮೇಲೆ ನನಗೂ ಅಂಥ ಗೌರವ. ಅಂಬರೀಷ ಇನ್ನೊಬ್ಬನಿಗೆ ತಲೆಬಾಗಿದವನಲ್ಲ. ಆತನಲ್ಲಿಗೇ ಹೋಗಿ ಕ್ಷಮೆ ಯಾಚಿಸು.'

ದುರ್ವಾಸರು ಮರಳಿ ಅಂಬರೀಷನಲ್ಲಿಗೆ ಬರುತ್ತಾರೆ. "ಅಯ್ಯಾ, ನೀನು ಗೆದ್ದೆ. ನಾನೇ ಸೋತೆ. ತಪ್ಪಾಯಿತು," ಎಂದು ಕೇಳಿಕೊಳ್ಳುತ್ತಾರೆ. ಅಂಬರೀಷನ ಪ್ರಾರ್ಥನೆಯಂತೆ ವಿಷ್ಣುಚಕ್ರ ಮರಳಿ ಹೋಗುತ್ತದೆ. ಹೀಗೆ ದುರ್ವಾಸರ ಪ್ರಸಂಗದ ಏಕಾದಶಿಯ ಮಹತ್ವವನ್ನೂ ಭಗವದ್ ಭಕ್ತಿಯ ಮಹಿಮೆಯನ್ನೂ ಭಾಗವತ ವಿವರಿಸುತ್ತದೆ. ಒಂದು ಮಾಸದಲ್ಲಿ ಬರುವ 30 ತಿಥಿಗಳ ಪೈಕಿ ಇತರ ಎಲ್ಲ 28 ತಿಥಿಗಳ ನಿರ್ಣಯವು ಸೂರ್ಯೋದಯ ಸಮಯಕ್ಕಾದರೆ ಏಕಾದಶಿ ತಿಥಿಯ ನಿರ್ಣಯವು ಸೂರ್ಯೋದಕ್ಕೆ ಸ್ವಲ್ಪ ಮುಂಚಿತವಾಗಿ ಬರುವ ಅರುಣೋದಯ ಸಮಯಕ್ಕಾಗಿದೆ. ಸಂಪ್ರದಾಯ ಭೇದಗಳಿಂದಾಗಿ ಸ್ಮಾರ್ತ, ಶ್ರೀ ವೈಷ್ಣವ ಮತ್ತು ವೈಷ್ಣವ ಏಕಾದಶಿ ದಿನದ ಆಚರಣೆಯ ಒಮ್ಮೊಮ್ಮೆ ಪರಸ್ಪರ ಒಂದು ದಿನದ ಮಟ್ಟಿಗೆ ವ್ಯತ್ಯಾಸವಾಗಬಹುದಾಗಿದೆ.

ಏಕಾದಶಿಗಳ ಹೆಸರುಗಳು ಮತ್ತು ಅವುಗಳ ಫಲ

1) ಚೈತ್ರ ಶುಕ್ಲ ಏಕಾದಶಿ – ಕಾಮದಾ – ಕೋರಿಕೆಗಳನ್ನು ಪೂರೈಸುತ್ತದೆ.
2) ಚೈತ್ರ ಬಹುಳ ಏಕಾದಶಿ – ವರೂಧಿನಿ – ಸಹಸ್ರ ಗೋದಾನ ಫಲವು ಲಭಿಸುತ್ತದೆ.
3) ವೈಶಾಖ ಶುದ್ಧ ಏಕಾದಶಿ – ಮೋಹಿನಿ – ದರಿದ್ರನು ಧನವಂತನಾಗುತ್ತಾನೆ.
4) ವೈಶಾಖ ಬಹುಳ ಏಕಾದಶಿ – ಅಪರಾ – ರಾಜ್ಯಪ್ರಾಪ್ತಿ
5) ಜ್ಯೇಷ್ಠ ಶುಕ್ಲ ಏಕಾದಶಿ – ನಿರ್ಜಲ – ಆಹಾರ ಸಮೃದ್ಧಿ
6) ಜ್ಯೇಷ್ಠ ಬಹುಳ ಏಕಾದಶಿ – ಯೋಗಿನಿ – ಪಾಪಗಳನ್ನು ಹರಿಸುತ್ತದೆ (ಪಾಪಗಳಿಂದ ಮುಕ್ತಗೊಳಿಸುತ್ತದೆ)
7) ಆಷಾಢ ಶುದ್ಧ ಏಕಾದಶಿ – ದೇವಶಯನಿ – ಸಂಪತ್ ಪ್ರಾಪ್ತಿ – ವಿಷ್ಣುವು ಯೋಗನಿದ್ರೆಗೆ ಜಾರುವ ದಿನ
8) ಆಷಾಢ ಬಹುಳ ಏಕಾದಶಿ – ಕಾಮಿಕಾ – ಬೇಡಿದ ವರಗಳು ಪ್ರಾಪ್ತಿಯಾಗುತ್ತವೆ.
9) ಶ್ರಾವಣ ಶುಕ್ಲ ಏಕಾದಶಿ – ಪುತ್ರದಾ – ಸತ್ ಸಂತಾನ ಪ್ರಾಪ್ತಿ
10) ಶ್ರಾವಣ ಬಹುಳ ಏಕಾದಶಿ – ಅಜಾ – ರಾಜ್ಯ, ಪತ್ನೀಪುತ್ರ ಪ್ರಾಪ್ತಿ ಮತ್ತು ಆಪತ್ ನಿವಾರಣೆ
11) ಭಾದ್ರಪದ ಶುದ್ಧ ಏಕಾದಶಿ – ಪರಿವರ್ತನ (ಯೋಗ ನಿದ್ರೆಯಲ್ಲಿ ವಿಷ್ಣುವು ಪಕ್ಕಕ್ಕೆ ಹೊರಳುತ್ತಾನಂತೆ ಹಾಗಾಗಿ ಇದು ಪರಿವರ್ತನ) – ಯೋಗ ಸಿದ್ಧಿ
12) ಭಾದ್ರಪದ ಬಹುಳ ಏಕಾದಶಿ – ಇಂದಿರಾ – ಸಂಪದಗಳು ಮತ್ತು ರಾಜ್ಯ ಪ್ರಾಪ್ತಿಯುಂಟಾಗುತ್ತದೆ.
13) ಆಶ್ವಯುಜ ಶುಕ್ಲ ಏಕಾದಶಿ – ಪಾಪಾಂಕುಶ – ಪುಣ್ಯಪ್ರದವಾದುದು
14) ಆಶ್ವಯುಜ ಬಹುಳ ಏಕಾದಶಿ – ರಮಾ – ಸ್ವರ್ಗಪ್ರಾಪ್ತಿ
15) ಕಾರ್ತೀಕ ಶುಕ್ಲ ಏಕಾದಶಿ – ಪ್ರಬೋಧಿನಿ (ಯೋಗ ನಿದ್ರೆಯಿಂದ ವಿಷ್ಣುವು ಎಚ್ಚರಗೊಳ್ಳುವ ದಿನ) – ಜ್ಞಾನಸಿದ್ಧಿ
16) ಕಾರ್ತೀಕ ಬಹುಳ ಏಕಾದಶಿ – ಉತ್ಪತ್ತಿ – ದುಷ್ಟ ಸಂಹಾರ (ಮುರಾಸುರನನ್ನು ಸಂಹರಿಸಿದ ಕನ್ಯೆಯು ವಿಷ್ಣುವಿನ ಶರೀರದಿಂದ ಜನಿಸಿದ ದಿನ)
17) ಮಾರ್ಗಶಿರ ಶುಕ್ಲ ಏಕಾದಶಿ – ಮೋಕ್ಷದಾ – ಮೋಕ್ಷಪ್ರಾಪ್ತಿ (ಮಾರ್ಗಶಿರ ಶುಕ್ಲ ಏಕಾದಶಿಯು ಧನುರ್ಮಾಸದಲ್ಲಿ ಬಂದರೆ ಅದುವೇ ವೈಕುಂಠ ಏಕಾದಶಿಯಾಗುತ್ತದೆ*)
18) ಮಾರ್ಗಶಿರ ಬಹುಳ ಏಕಾದಶಿ – ವಿಮಲಾ (ಸಫಲಾ) – ಅಜ್ಞಾನ ನಿವೃತ್ತಿ
19) ಪುಷ್ಯ ಶುಕ್ಲ ಏಕಾದಶಿ – ಪುತ್ರದಾ – ಪುತ್ರಪ್ರಾಪ್ತಿ (ಪುಷ್ಯ ಶುಕ್ಲ ಏಕಾದಶಿಯು ಧನುರ್ಮಾಸದಲ್ಲಿ ಬಂದರೆ ಅದುವೇ ವೈಕುಂಠ ಏಕಾದಶಿಯಾಗುತ್ತದೆ*)
*ವೈಕುಂಠ ಏಕಾದಶಿ ಮಾರ್ಗಶಿರ ಅಥವಾ ಪುಷ್ಯ ಮಾಸದಲ್ಲಿ ಬರುತ್ತದೆಂದು ಈ ಮುಂಚೆಯೇ ಹೇಳಿದೆ.
20) ಪುಷ್ಯ ಕೃಷ್ಣ ಏಕಾದಶಿ – ಕಲ್ಯಾಣೀ (ಷಟ್‌ತಿಲಾ) – ಶಾರೀರಿಕ ಬಾಧೆಗಳಿಂದ ಮುಕ್ತಿ (ತೆಲುಗಿನಲ್ಲಿ ಈತಿ ಬಾಧಾ ನಿವಾರಣಂ ಎಂದು ಹೇಳಲಾಗಿದೆ)
21) ಮಾಘ ಶುಕ್ಲ ಏಕಾದಶಿ – ಕಾಮದಾ (ಜಯಾ) – ಶಾಪವಿಮುಕ್ತಿ
22) ಮಾಘ ಕೃಷ್ಣ ಏಕಾದಶಿ – ವಿಜಯಾ – ಸಕಲ ಕಾರ್ಯ ವಿಜಯ (ಇದು ಭೀಷ್ಮೈಕಾದಶಿ ಎಂದು ಪ್ರಸಿದ್ಧಿಯಾಗಿದೆ)
23) ಫಾಲ್ಗುಣ ಶುಕ್ಲ ಏಕಾದಶಿ – ಆಮಲಕೀ – ಆರೋಗ್ಯ ಪ್ರಾಪ್ತಿ
24) ಫಾಲ್ಗುಣ ಕೃಷ್ಣ ಏಕಾದಶಿ – ಸೌಮ್ಯಾ – ಪಾಪ ವಿಮುಕ್ತಿ



ಪ್ರಶಾಂತಭಟ್ ಕೋಟೇಶ್ವರ

# ಆತ್ಮವಿಶ್ವಾಸ ಹೊಂದಲು ಸ್ವಯಂತರ ಬೇತಿ

ನಾವು ನೋಡುವ ಕೆಲವು ಜನರು ಅತ್ಯಂತ ಆತ್ಮವಿಶ್ವಾಸದಿಂದ ವರ್ತಿಸುತ್ತಾರೆ. ಅವರ ನಡೆ ನುಡಿ, ಉಡುಗೆ ತೊಡುಗೆಗಳು, ಮಾತು, ಸಂವಹನ ಕೌಶಲ್ಯ ಹಾಗೂ ಸೂಕ್ಷ್ಮತನಗಳು ಅವರಲ್ಲಿರುವ ಆತ್ಮವಿಶ್ವಾಸವನ್ನು ಎತ್ತಿ ತೋರುತ್ತವೆ. ಅಂತಹವರನ್ನು ನೋಡಿದಾಗ ಉಳಿದವರು ನಮಗೇಕೆ ಈ ರೀತಿಯ ಆತ್ಮ ವಿಶ್ವಾಸ ಇಲ್ಲ ಎಂದು ಬೇಸರ ಪಟ್ಟುಕೊಳ್ಳುತ್ತಾರೆ... ಮತ್ತೆ ಕೆಲವರು ಅಂತಹ ಆತ್ಮವಿಶ್ವಾಸ ತಮಗೂ ಇದ್ದರೆ ಅದೆಷ್ಟು ಚೆನ್ನ! ಎಂದು ಬಯಸುವುದು ಕೂಡ ಉಂಟು ಊಟ ಮಾಡಿದ್ದ ತಕ್ಷಣ ತಟ್ಟೆಯನ್ನು ಎತ್ತಿಕೊಂಡು ಒಯ್ದು ಅಡುಗೆ ಮನೆಯಲ್ಲಿ ಇಟ್ಟು ಬರುವುದಿಲ್ಲ ಆಕೆ... ಊಟ ಮಾಡುತ್ತಾ ತಾನು ಓದುತ್ತಿದ್ದ ಪೇಪರ್ ಅನ್ನು ಸಂಪೂರ್ಣವಾಗಿ ಓದಿ ಮುಗಿಸುವವರೆಗೆ ಆಕೆ ಎದ್ದು ಬರುವುದಿಲ್ಲ. ಇದನ್ನು ನಮ್ಮ ಮೆದುಳಿನಲ್ಲಿರುವ ಕೋಶಗಳು ಅರ್ಥ ಮಾಡಿಕೊಳ್ಳುತ್ತವೆ. ಇನ್ನು ಮುಂದೆಯೂ ಆಕೆ ಹಾಗೆಯೇ ಅದನ್ನು ನಿರ್ವಹಿಸಲು ಅನುವಾಗುವಂತೆ ತಮ್ಮನ್ನು ತಾವು ರೂಪಿಸಿಕೊಳ್ಳುತ್ತವೆ. ಇದು ಮೆದುಳಿನ ನೆನಪಿನ ಕೋಶಗಳು ನಮ್ಮನ್ನು ಅರಿತುಕೊಳ್ಳುವ ರೀತಿ. ನಮಗೆ ಬೇಕಿರಲಿ ಇಲ್ಲವೇ ಬೇಡವಾಗಿರಲಿ ಆದರೂ ಕೂಡ ನಾವು ಊಟವಾದ ತಕ್ಷಣ ಎದ್ದು ಹೋಗಿ ತಟ್ಟೆಯನ್ನು ಸಿಂಕ್ ನಲ್ಲಿ ಹಾಕಿ ಬಂದರೆ ನಮ್ಮ ಮೆದುಳಿನ ನರ ಕೋಶಗಳು ಅದನ್ನು ಗ್ರಹಿಸುತ್ತದೆ.

ನಿಜ ಹೇಳಬೇಕೆಂದರೆ ನಮ್ಮ ದೇಹ ಮತ್ತು ಬುದ್ಧಿಗಳಲ್ಲಿ ಆ ರೀತಿಯ ಒಂದು ವಿಶ್ವಾಸದ ಸೆಳಕು ಇದ್ದೇ ಇರುತ್ತದೆ. ಆದರೆ ನಮಗೆ ಅರಿವಿಲ್ಲವೇ ಅದರ ತಂತು ಕಡಿದು ಹೋಗಿರುತ್ತದೆ. ಆ ತಂತನ್ನು ಮತ್ತೆ ಮರುಜೋಡಿಸುವ ಮೂಲಕ ನಾವು ನಮ್ಮ ಆಲೋಚನೆ ಮತ್ತು ಕ್ರಿಯೆಗಳಲ್ಲಿ ಆತ್ಮವಿಶ್ವಾಸದ ಮರುಪೂರಣವನ್ನು ಮಾಡಿಕೊಳ್ಳಬೇಕು. ಅತ್ಯಂತ ಚಿಕ್ಕ ಪುಟ್ಟ ನಡೆಗಳ ಮೂಲಕ ನಾವು ನಮ್ಮ ಮೆದುಳಿಗೆ ಈ ಕುರಿತು ತರಬೇತಿ ನೀಡಬೇಕು. ಆ ನಡೆಗಳು ನಮ್ಮನ್ನು ರೂಪಿಸುತ್ತದೆ.

*ದಾಟಲಾರದಂತಹ ಇತಿ ಮಿತಿಗಳನ್ನು ನಮಗೆ ನಾವೇ ಹಾಕಿಕೊಳ್ಳಬೇಕು. ನಮ್ಮ



ಮೆದುಳಿನ ಮುಂಭಾಗದಲ್ಲಿರುವ ಕಾರ್ಟೆಕ್ಸ್ ಗಳು ಈ ರೀತಿಯಾಗಿ ಮಿತಿಗಳನ್ನು ಸರಿಯಾಗಿ ನಿರ್ವಹಿಸಲು ತಯಾರಾಗುತ್ತವೆ. ಈ ರೀತಿ ಮಾಡುವುದರಿಂದ ಶೇಕಡ 35 ರಷ್ಟು ಒತ್ತಡದ ಹಾರ್ಮೋನುಗಳನ್ನು ದಮನಿಸಬಹುದು ಪ್ರತಿ ದಿನ ಕನಿಷ್ಠ ಎರಡು ಗಂಟೆಗಳ ಕಾಲ ಒಂದೇ ಕೆಲಸದಲ್ಲಿ ಆಳವಾಗಿ ತೊಡಗಿಕೊಳ್ಳಬೇಕು.

* ಅತ್ಯಂತ ಸ್ಪಷ್ಟವಾದ ಹಾಗೂ ಅಧಿಕಾರಯುತವಾದ ಧ್ವನಿಯಲ್ಲಿ ಮಾತನಾಡಬೇಕು. ನಮ್ಮ ಧ್ವನಿಯಲ್ಲಿನ ಅಧಿಕಾರದ ಭಾವ ಕೇಳುಗರ ನರವ್ಯೂಹದ ಕೋಶದ ಲ್ಲಿ ನಂಬಿಕೆಯನ್ನು ಉಂಟು ಮಾಡುತ್ತದೆ. ಆತ್ಮವಿಶ್ವಾಸವು ನಮ್ಮಲ್ಲಿ ಇರಬಹುದೇ? ಹೌದೇ ? ನೋಡುತ್ತೇನೆ ? ಎಂಬ ಭಾವ ಇರಕೂಡದು.

*ನಮ್ಮ ಮೆದುಳು ಗುಣಮಟ್ಟ ಹಾಗೂ ಅದರ ಇರವನ್ನು ಕುರಿತು ತನ್ನದೇ ಆದ ಒಂದು ಗ್ರಹಿಕೆಯನ್ನು ಹೊಂದಿರುತ್ತದೆ... ಆದ್ದರಿಂದ ನೀವು ನಿಮ್ಮ ಕುರಿತು ಏನನ್ನೇ ಯೋಚಿಸಿದರು ಅದಕ್ಕೆ ಶೇಕಡ 20ರಷ್ಟು ಹೆಚ್ಚು ನಿಮ್ಮದಾಗಿ ಯೋಚಿಸಿ.

*ನಿಮಗೆ ನೀವೇ ಕೆಲವು ಪ್ರಮಾಣಗಳನ್ನು ಮಾಡಿಕೊಂಡು ಅವುಗಳನ್ನು ನಿಭಾಯಿಸಿ. ನಿಮ್ಮ ಮೇಲೆ ನಿಮಗೆ ನಂಬಿಕೆ ಬೆಳೆಯಲು ಡೋಪ ಮೈನ್ ಎಂಬ ಹಾರ್ಮೋನ್ ಕಾರ್ಯ ನಿರ್ವಹಿಸುತ್ತದೆ... ಅದರ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ನಿಮ್ಮ ಕ್ಷಮತೆಯನ್ನು ಹೆಚ್ಚಿಸಬೇಕು. ನಿಮಗೆ ನೀವೇ ಬದ್ಧರಾಗಿ ನಿಮ್ಮ ಬಲವನ್ನು ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಬೇಕು. ಇದು ನಿಮ್ಮ ಆತ್ಮ ಆತ್ಮ ಬಲವನ್ನು ಹೆಚ್ಚಿಸುತ್ತದೆ. ಪ್ರತಿದಿನ ನಿಮ್ಮ ಮೂರು ಅತ್ಯಂತ ಆಪ್ತವಾದ ಚಟುವಟಿಕೆಗಳಿಗೆ ಸಮಯವನ್ನು ಮೀಸಲಿಡಿ.

*ಇತರರ ಬೆಳವಣಿಗೆಯನ್ನು ಸಂತೋಷದಿಂದ ಸ್ವೀಕರಿಸಿ. ಉತ್ತಮವಾದ ಸಮೃದ್ಧಿಯ ಮನಸ್ಥಿತಿಯು ನಮ್ಮ ಮೆದುಳಿನ ಕೋಶಗಳನ್ನು ಬೆಳವಣಿಗೆಯ ನಿಟ್ಟಿನಲ್ಲಿ ಕಾರ್ಯ ಶೀಲವಾಗುವಂತೆ ಆಕರ್ಷಿಸುತ್ತದೆ. ಧನಾತ್ಮಕವಾದ ಗುರುತಿಸಿಕೊಳ್ಳುವಿಕೆ ಸಾಮಾಜಿಕ ಬಂಧಗಳನ್ನು ಹೆಚ್ಚಿಸುತ್ತದೆ.. ಆದ್ದರಿಂದ ಪ್ರತಿದಿನ ನಿಮಗೆ ನೀವು ಕನಿಷ್ಠ ಮೂರು ವಿಷಯಗಳನ್ನು ಸಾಧಿಸಲೇಬೇಕು.

* ನಾಟಕೀಯವಾದಂತಹ ವಸ್ತು, ವಿಷಯ ಹಾಗೂ ಸನ್ನಿವೇಶಗಳಿಂದ ಸದಾ ದೂರವಾಗಿರಿ. ಅಂತಹ ಸನ್ನಿವೇಶಗಳು ನಿಮ್ಮಲ್ಲಿ ಒತ್ತಡವನ್ನು ಉಂಟು ಮಾಡುತ್ತವೆ... ಪರಿಣಾಮವಾಗಿ ನಿಮ್ಮ ನಿರ್ಣಾಯಾತ್ಮಕ ಭಾವ ಕುಸಿಯುತ್ತದೆ. ನಿಮ್ಮ ಭಾವನೆಗಳನ್ನು ನೀವು ನಿಯಂತ್ರಣದಲ್ಲಿ ಇಟ್ಟುಕೊಳ್ಳುವ ಮತ್ತು ಅದನ್ನು ದೀರ್ಘಕಾಲ ರೂಢಿಸಿಕೊಳ್ಳುವ ಮೂಲಕ ಮಾನಸಿಕವಾಗಿ ಬಲಿಷ್ಠರಾಗಬೇಕು.

* ಆಗಾಗ ತುಸು ವಿರಾಮವನ್ನು ಹೊಂದಬೇಕು... ನಮ್ಮ ಮೆದುಳು ಒತ್ತಡದಲ್ಲಿರುವಾಗ ಕಲಿಯುವುದಕ್ಕಿಂತ ಹೆಚ್ಚು ವಿಷಯಗಳನ್ನು ವಿರಾಮದಲ್ಲಿ ಅರ್ಥ ಮಾಡಿಕೊಳ್ಳುತ್ತದೆ ಹಾಗೂ ಕಲಿಯುತ್ತದೆ.. ಈ ರೀತಿ ವಿರಾಮದ ನಂತರ ಮತ್ತೆ ಕಾರ್ಯ ಚಟುವಟಿಕೆಯಲ್ಲಿ ತೊಡಗಿಕೊಂಡಾಗ ಶೇಕಡ 31 ರಷ್ಟು ಮೆದುಳಿನ ಪ್ರಗತಿ ಹೆಚ್ಚುತ್ತದೆ. ಪ್ರತಿದಿನ ಕನಿಷ್ಠ 3 ರಿಂದ ಗರಿಷ್ಠ 10 ನಿಮಿಷಗಳ ಕಾಲ ವಿರಾಮವನ್ನು ನೀಡಬೇಕು.... ಎಷ್ಟೋ ಬಾರಿ ಮಧ್ಯಾಹ್ನ ನಾವು ತೆಗೆದುಕೊಳ್ಳುವ ಹತ್ತು ನಿಮಿಷಗಳ ಪವರ್ ನ್ಯಾಪ್ ನಮ್ಮಲ್ಲಿ ಮುಂದಿನ ನಾಲ್ಕೈದು ಗಂಟೆಗಳ ಕಾಲ ನಿರಂತರವಾಗಿ ಕಾರ್ಯನಿರ್ವಹಿಸುವಲ್ಲಿ ಸಹಾಯಕವಾಗುತ್ತದೆ ಅಲ್ಲವೇ ?

*ನಮ್ಮ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ನಮ್ಮದೇ ಆಗಿರಬೇಕು ಹೊಸ ಹೊಸ ವಿಷಯಗಳನ್ನು ಕಲಿಯುತ್ತಾ ನಮ್ಮ ನರ ಕೋಶಗಳಲ್ಲಿ ಹೊಸ ನ್ಯೂರಾನ್ಗಳನ್ನು ಸೃಷ್ಟಿಸಲು ಅನುವು ಮಾಡಿಕೊಡಬೇಕು. ಅಸಲಿಗೆ ಬಡ್ಡಿಯು ಹೆಚ್ಚಾಗುವಂತೆ ಜ್ಞಾನವು ನಮ್ಮಲ್ಲಿ ಹೆಚ್ಚುತ್ತಾ ಹೋಗುತ್ತದೆ. ಪ್ರತಿದಿನ ಕನಿಷ್ಠ 20 ಪುಟಗಳಷ್ಟು ಓದಲೇಬೇಕು.

*ನಿಮಗೆ ನಿಮ್ಮದೇ ಆದ ಒಂದು ಪುಟ್ಟ ಸ್ಪೇಸ್ ಇರಲೇಬೇಕು. ಅದು ನಿಮಗೆ ವಿರಾಮವನ್ನು ನೀಡುವ ಮೂಲಕ ನಿಮ್ಮ ಕಾರ್ಯ ಕ್ಷಮತೆಯನ್ನು ಹೆಚ್ಚಿಸುತ್ತದೆ. ನಿಮ್ಮ ಯೋಚನೆಗಳು ಕಾರ್ಯಗತ ಮಾಡುವ ಮುನ್ನವೇ ಆ ಕುರಿತು ಮಾತನಾಡಬೇಡಿ.

*ಇತರರು ನಿಮ್ಮನ್ನು ಹೊಗಳುವಾಗ ನಗು ಮುಖದಿಂದ ಆ ಹೊಗಳಿಕೆಯನ್ನು ಸ್ವೀಕರಿಸಿ. ಧನಾತ್ಮಕ ಹೊಗಳಿಕೆಗಳು ನಿಮ್ಮಲ್ಲಿ ಮಾನಸಿಕ ದೃಢತೆಯನ್ನು ತರುತ್ತವೆ... ಕೃತಜ್ಞತಾ ಭಾವವು ನಿಮ್ಮಲ್ಲಿ ಧನ್ಯತೆಯ ಭಾವವನ್ನು ಮೂಡಿಸುತ್ತದೆ. ಅತ್ಯಂತ ಸರಳವಾಗಿ ಧನ್ಯವಾದವನ್ನು ಸೂಚಿಸಿ. ಈ ರೀತಿ ವೈಜ್ಞಾನಿಕವಾಗಿ ಚಿಕ್ಕ ಪುಟ್ಟ ವರ್ತನೆಗಳಲ್ಲಿನ ಬದಲಾವಣೆಗಳನ್ನು ಮಾಡಿಕೊಳ್ಳುವ ಮೂಲಕ ನಾವು ನಮ್ಮ ಮೆದುಳಿನ ನರಕೋಶಗಳನ್ನು ಸದಾ ಚಟುವಟಿಕೆಯಿಂದ ಇರುವಂತೆ ಮಾಡಬೇಕು... ಪ್ರತಿ ಪುಟ್ಟ ಗೆಲುವು ಕೂಡ ನಮ್ಮನ್ನು ಮಾನಸಿಕವಾಗಿ ದೃಢವಾಗಿಸುತ್ತದೆ.... ನಮ್ಮ ಮೇಲೆ ನಮಗೆ ನಂಬಿಕೆ ಮತ್ತು ಆತ್ಮ ವಿಶ್ವಾಸ ಹೆಚ್ಚುತ್ತದೆ.

*ಯಾವುದಾದರೂ ಒಂದು ಒಳ್ಳೆಯ ಹವ್ಯಾಸವನ್ನು ನಿಮ್ಮದಾಗಿಸಿಕೊಳ್ಳಿ ಒಂದು ಮಂಡಲದ ಕಾಲ ಅಂದರೆ ಸರಿಸುಮಾರು 40 ದಿನಗಳ ಕಾಲ ಅದನ್ನು ಸತತವಾಗಿ ಮಾಡುತ್ತಾ ಬನ್ನಿ. ಆಗ ಅದು ನಿಮ್ಮ ದೈನಂದಿನ ಬದುಕಿನ ಒಂದು ಕೆಲಸವಾಗುತ್ತರೆ.

ತಡ ಏಕೆ ಸ್ನೇಹಿತರೆ ?

ವಯಸ್ಸಾಗುವುದು ದೇಹಕ್ಕೆ ಹೊರತು ಮನಸ್ಸಿಗಲ್ಲ ಈಗಲೂ ಕೂಡ ನಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸಿಕೊಳ್ಳಲು ಪ್ರಯತ್ನಿಸಿ ನಮ್ಮ ಬದುಕಿನಲ್ಲಿ ನಾವೇ ಅಗ್ರಗಣ್ಯರಾಗುವ... ಏನಂತೀರಾ ?



ವೀಣಾ ಹೇಮಂತ್ ಗೌಡ ಪಾಟೀಲ್

# ವಿಧಾನ ಪರಿಷತ್ ಚುನಾವಣೆ : ಇಂದು ಜೆಡಿಎಸ್ ಮಹತ್ವದ ಸಭೆ



ಬೆಂಗಳೂರು: ವಿಧಾನಸಭೆಯಿಂದ ವಿಧಾನ ಪರಿಷತ್ತಿನ ಏಳು ಸದಸ್ಯರ ಸ್ಥಾನಗಳಿಗೆ ನಡೆಯಲಿರುವ ಚುನಾವಣೆಯಲ್ಲಿ ಜೆಡಿ-ಎಸ್ ಅಭ್ಯರ್ಥಿ ಗೋವಿಂದರಾಜು ಅವರ ಗೆಲುವಿಗಾಗಿ ಪಕ್ಷವು ಇಂದು ಮಹತ್ವದ ಸಭೆ ನಡೆಸಲಿದೆ.

ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ **H. D. Kumaraswamy** ಅವರ ಜೆ.ಪಿ.ನಗರ ನಿವಾಸದಲ್ಲಿ ಸಂಜೆ 4 ಗಂಟೆಗೆ ಸಭೆ ನಡೆಯಲಿದೆ. ಸಭೆಗೆ ಮಾಜಿ ಪ್ರಧಾನಿ ಊ. ಆ. ಆಜತಜ ಉಠಿತಿಜಚಿ ನೇತೃತ್ವ ವಹಿಸಲಿದ್ದು, ಪಕ್ಷದ ಎಲ್ಲಾ ಶಾಸಕರು, ಮಾಜಿ ಶಾಸಕರು, ಹಾಲಿ ಮತ್ತು ಮಾಜಿ ವಿಧಾನ ಪರಿಷತ್ ಸದಸ್ಯರು ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಹೆಚ್ಚುವರಿ ಅಭ್ಯರ್ಥಿಯನ್ನು ಕಣಕ್ಕಿಳಿಸಿರುವ ಹಿನ್ನೆಲೆಯಲ್ಲಿ ಚುನಾವಣೆಯಲ್ಲಿ ಪೈಪೋಟಿ ತೀವ್ರಗೊಂಡಿದೆ. ಗುಪ್ತ ಮತದಾನ ನಡೆಯುವ ಕಾರಣ ಅಡ್ಡಮತದಾನದ ಸಾಧ್ಯತೆಯನ್ನು ತಡೆಯುವ ಬಗ್ಗೆ ಸಭೆಯಲ್ಲಿ ವಿಶೇಷ ಚರ್ಚೆ ನಡೆಯಲಿದೆ ಎನ್ನಲಾಗಿದೆ. ಜೆಡಿಎಸ್‌ನ ಎಲ್ಲಾ 18 ಶಾಸಕರ ಮತಗಳು ಪಕ್ಷದ ಅಧಿಕೃತ ಅಭ್ಯರ್ಥಿ ಗೋವಿಂದರಾಜು ಅವರಿಗೆ ಸಿಗುವಂತೆ ಕಟ್ಟುನಿಟ್ಟಿನ ಸೂಚನೆ ನೀಡುವ ಸಾಧ್ಯತೆ ಇದೆ. ಜೆಡಿಎಸ್ ಅಭ್ಯರ್ಥಿಯ ಗೆಲುವಿಗೆ ಇನ್ನೂ ಸುಮಾರು 10 ಮತಗಳ ಅಗತ್ಯವಿದ್ದು, ಬಿಜೆಪಿ ಹೆಚ್ಚುವರಿ ಮತಗಳು ಹಾಗೂ ಬಿಜೆಪಿ ಬೆಂಬಲಿತ ಸದಸ್ಯರ ಮತಗಳನ್ನು ಸೆಳೆಯುವ ಕುರಿತು ನಾಯಕರು ಚರ್ಚಿಸಲಿದ್ದಾರೆ. ಯಾವುದೇ ಕಾರಣಕ್ಕೂ ಜೆಡಿ-ಎಸ್ ಮತಗಳು ಕಾಂಗ್ರೆಸ್ ಅಭ್ಯರ್ಥಿಯ ಪರ ಹೋಗದಂತೆ ಎಚ್ಚರಿಕೆ ವಹಿಸುವಂತೆ ಸೂಚನೆ ನೀಡಲಾಗುತ್ತಿದೆ. ಹಿಂದಿನ ವಿಧಾನ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದ ಉದಾಹರಣೆಗಳನ್ನು ಸಭೆಯಲ್ಲಿ ಪ್ರಸ್ತಾಪಿಸಿ ಶಾಸಕರಿಗೆ ಎಚ್ಚ-ರಿಕೆ ನೀಡಲಾಗುತ್ತದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಜೊತೆಗೆ ಇತರೆ ಪಕ್ಷಗಳು ಹಾಗೂ ಪಕ್ಷೇತರ ಸದಸ್ಯರ ಬೆಂಬಲ ಪಡೆಯುವ ಸಾಧ್ಯತೆಗಳ ಬಗ್ಗೆಯೂ ಚರ್ಚೆ ನಡೆಯಲಿದೆ. ಈ ಚುನಾವಣೆ ಜೆಡಿಎಸ್‌ಗೆ ಪ್ರತಿಷ್ಠೆಯ ವಿಷಯವಾಗಿದ್ದು, ಅಭ್ಯರ್ಥಿಯ ಗೆಲುವಿಗಾಗಿ ಎಲ್ಲಾ ರೀತಿಯ ತಂತ್ರಗಳನ್ನು ರೂಪಿಸಲು ಪಕ್ಷದ ಹಿರಿಯ ನಾಯಕರು ಮುಂದಾಗಿದ್ದಾರೆ. ಬಿಜೆಪಿ ಶಾಸಕರ ಎರಡನೇ ಆದ್ಯತೆಯ ಮತಗಳನ್ನು ಪಡೆಯುವ ಸಾಧ್ಯತೆ ಸೇರಿದಂತೆ ಹಲವು ರಾಜಕೀಯ ಲೆಕ್ಕಾಚಾರಗಳ ಬಗ್ಗೆ ಸಭೆಯಲ್ಲಿ ಸಮಾಲೋಚನೆ ನಡೆಯುವ ನಿರೀಕ್ಷೆಯಿದೆ.

# ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಸಂಚರಿಸುತ್ತಿದ್ದ ರೈಲಿನ ಮೇಲೆ ಕಲ್ಲು ತೂರಾಟ



ಕಾನ್ಪುರ: ಆರ್‌ಎಸ್‌ಎಸ್ ಸರಸಂಘ ಚಾಲಕ ಮೋಹನ್ ಭಾಗವತ್ ಅವರು ಸಂಚರಿಸುತ್ತಿದ್ದ ರೈಲಿನ ಮೇಲೆ ಕಲ್ಲು ತೂರಾಟ ನಡೆದಿರುವ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ. ಕಾನ್ಪುರದಿಂದ ದೆಹಲಿಗೆ ತೆರಳುತ್ತಿದ್ದ ಸ್ವರ್ಣ ಶತಾಬ್ದಿ ಎಕ್ಸ್‌ಪ್ರೆಸ್ ರೈಲಿನ ಮೇಲೆ ಫಿಜೋರಾಬಾದ್ ಬಳಿ ಕಲ್ಲು ತೂರಾಟ ನಡೆಸಲಾಗಿದೆ.

ರೈಲ್ವೆ ಮತ್ತು ಸ್ಥಳೀಯ ಪೊಲೀಸರು ಅತ್ಯಂತ ತೀವ್ರ ಹಾಗೂ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದಾರೆ. ರೈಲಿನಲ್ಲಿದ್ದ ಆರ್-ಎಸ್‌ಎಸ್ ಸರಸಂಘಚಾಲಕ್ ಮೋಹನ್ ಭಾಗವತ್ ಸೇರಿದಂತೆ ಎಲ್ಲಾ ಪ್ರಯಾಣಿಕರು ಸಂಪೂರ್ಣ ಸುರಕ್ಷಿತವಾಗಿದ್ದು, ತನಿಖೆ ಚುರುಕುಗೊಂಡಿದೆ. ಸ್ವರ್ಣ ಶತಾಬ್ದಿ ಎಕ್?ಸಪ್ರೆಸ್ (ರೈಲು ಸಂಖ್ಯೆ 12003) ಸಂಜೆ 7.15 ರ ಸುಮಾರಿಗೆ ಫಿರೋಜಾಬಾದ್ ಜಿಲ್ಲೆಯ ಮಖನ್‌ಪುರ ನಿಲ್ದಾಣದ ಬಳಿ ಹಾದುಹೋಗುವಾಗ ಈ ಕಲ್ಲು ತೂರಾಟ ನಡೆದಿದೆ. ಕಲ್ಲು ಎಸಿ ಕೋಚ್‌ನ ಕಿಟಕಿಗೆ ತಗುಲಿ ಹೊರಗಿನ ಗಾಜು ಮಾತ್ರ ಬಿರುಕು ಬಿಟ್ಟಿದೆ. ಅದೇ ಕೋಚ್‌ನಲ್ಲಿದ್ದ ಮೋಹನ್ ಭಾಗವತ್ ಅವರು ಎದುರು ಭಾಗದ ಸೀಟಿನಲ್ಲಿ ಕುಳಿತಿದ್ದರಿಂದ ಅವರಿಗೆ ಹಾಗೂ ರೈಲಿನಲ್ಲಿದ್ದ ಇತರ ಯಾವುದೇ ಪ್ರಯಾಣಿಕರಿಗೆ ಯಾವುದೇ ರೀತಿಯ ಹಾನಿಯಾಗಿಲ್ಲ. ಘಟನೆ ನಡೆದ ತಕ್ಷಣವೇ ಆಗ್ರಾ ವಲಯದ ಎಡಿಜಿ ಎಸ್‌ಕೆ ಭಗತ್, ಡಿಐಜಿ ಶೈಲೇಶ್ ಪಾಂಡೆ ಮತ್ತು ಫಿರೋಜಾಬಾದ್ ಎಸ್‌ಎಸ್‌ಪಿ ಆದಿತ್ಯ ಲಾಂಘೆ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳ ದಂಡೇ ಸ್ಥಳಕ್ಕೆ ಧಾವಿಸಿತು. ಪರಿಸ್ಥಿತಿಯನ್ನು ಅದ್ಭುತವಾಗಿ ನಿಯಂತ್ರಿಸಿದ ಪೊಲೀಸರು, ಹಳಿಗಳ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಆಧರಿಸಿ ಕೇವಲ ಕೆಲವೇ ಗಂಟೆಗಳಲ್ಲಿ ಒಬ್ಬ ಶಂಕಿತ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ತುಂಡ್ಲಾ ಜಂಕ್ಷನ್‌ನ ಹೊರ ಸಿಗ್ನಲ್‌ನಲ್ಲಿ ರೈಲನ್ನು ನಿಲ್ಲಿಸಿ, ಅಧಿಕಾರಿಗಳು ಇಡೀ ಕೋಚ್‌ನ ಸುರಕ್ಷತೆಯನ್ನು ಕೂಲಂಕಷವಾಗಿ ಪರಿಶೀಲಿಸಿದರು. ಎಲ್ಲವೂ ಸುರಕ್ಷಿತವಾಗಿದೆ ಎಂದು ಖಚಿತಪಡಿಸಿಕೊಂಡ ತಕ್ಷಣವೇ, ಅಂದರೆ ಸಂಜೆ 7.41 ಕ್ಕೆ ರೈಲು ದೆಹಲಿಯತ್ತ ತನ್ನ ಪ್ರಯಾಣವನ್ನು ಯಶಸ್ವಿಯಾಗಿ ಮುಂದುವರಿಸಿತು.

**ಜನಶ್ರೀ ಟೈಮ್ಸ್**
**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಹದಲಿ ಗ್ರಾಪಂಗೆ ಇಓ ಭೇಟಿ: ಕುಡಿಯುವ ನೀರಿನ ಸಮಸ್ಯೆ ಕುರಿತು ಸ್ಥಳ ಪರಿಶೀಲನೆ

ನರಗುಂದ : ತಾಲೂಕಿನ ಹದಲಿ ಗ್ರಾಮ ಪಂಚಾಯಿತಿ ಕಚೇರಿಗೆ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ಅವರು ಶುಕ್ರವಾರ ಸಾಯಂಕಾಲ ಭೇಟಿ ನೀಡಿ ಆಡಳಿತಾತ್ಮಕ ಹಾಗೂ ಸಾರ್ವಜನಿಕ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು.

ಭೇಟಿ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಹಾಜರಾತಿ ಪುಸ್ತಕವನ್ನು ಪರಿಶೀಲಿಸಿದ ಅವರು, ಅನಧಿಕೃತವಾಗಿ ಗೈರುಹಾಜರಾಗುವ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಪಿಡಿಓ ಅವರಿಗೆ ಸೂಚನೆ ನೀಡಿದರು. ಕಚೇರಿ ಸಮಯದಲ್ಲಿ ಸಿಬ್ಬಂದಿಗಳು ಹೊರಗಡೆ ತೆರಳುವ ಸಂದರ್ಭದಲ್ಲಿ ಚಲನವಲನ ಪುಸ್ತಕದಲ್ಲಿ ಭೇಟಿ ಸ್ಥಳ ಹಾಗೂ ಕಾರಣವನ್ನು



ಕಡ್ಡಾಯವಾಗಿ ದಾಖಲಿಸುವಂತೆ ತಿಳಿಸಿದರು. ಇದೇ ವೇಳೆ ನಗದು ಘೋಷಣೆ ರಜಿಸ್ಟರ್ ಹಾಗೂ ತೆರಿಗೆ ವಸೂಲಾತಿ ಮೊತ್ತವನ್ನು ಬ್ಯಾಂಕ್‌ಗೆ ಜಮಾ ಮಾಡಿರುವ ರೆಮಿಟೆನ್ಸ್ ರಜಿಸ್ಟರ್‌ಗಳನ್ನು ಪರಿಶೀಲಿಸಿ ಮಾಹಿತಿ ಪಡೆದರು. ಗ್ರಾಮದಲ್ಲಿ ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿಲ್ಲ ಎಂಬ ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ, ಇಓ ಅವರು ಗ್ರಾಮದಲ್ಲಿ ಸಂಚರಿಸಿ ಸ್ಥಳೀಯ ನಿವಾಸಿಗಳೊಂದಿಗೆ ಸಮಾಲೋಚನೆ ನಡೆಸಿದರು. ವಿವಿಧ ಓಣಿಗಳಲ್ಲಿ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಗ್ರಾಮಸ್ಥರಿಂದ ಮಾಹಿತಿ ಸಂಗ್ರಹಿಸಿದರು. ಬಳಿಕ ಸ್ಥಳದಲ್ಲಿದ್ದ ಪಿಡಿಓ ಅವರಿಗೆ ವಾಟ-ರ್ ಬೋರ್ಡ್ ಹಾಗೂ ಡಿಬಿಓಟಿ ಸಿಬ್ಬಂದಿಗಳೊಂದಿಗೆ ಸಮನ್ವಯ ಸಾಧಿಸಿ, ಗ್ರಾಮಸ್ಥರಿಗೆ ನಿಗದಿತ ಸಮಯದಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ನರಗುಂದ ವಿಧಾನಸಭಾ ಶಾಸಕರು ಸಿ.ಸಿ.ಪಾಟೀಲ್ ಅವರ ನೇತೃತ್ವದಲ್ಲಿ ಜೂನ್-01 ರಂದು ನಡೆದ ವಿಪತ್ತು ನಿರ್ವಹಣಾ ಸಮಿತಿ ಸಭೆಯಲ್ಲಿ ಹದಲಿ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಕುರಿತು ಚರ್ಚೆಯಾಗಿತ್ತು

# ಹೆಸರು ಬೆಳೆಗೆ ರಸ ಹೀರುವ ಕೀಟಗಳ ಭಾದೆ ರೈತರ ಜಮೀನಿಗೆ ಅಧಿಕಾರಿಗಳ ಭೇಟಿ

ಲಕ್ಷ್ಮೇಶ್ವರ: ತಾಲೂಕಿನ ಪ್ರಮುಖ ವಾಣಿಜ್ಯ ಬೆಳೆ ಹೆಸರು ಮುಂಗಾರು ಹಂಗಾಮಿನ ಬೆಳೆಯಾಗಿದ್ದು ಇದು 70 ರಿಂದ 75 ದಿನಗಳಲ್ಲಿ ಕೊಯ್ಲಿಗೆ ಬರುವ ಒಂದು ಪ್ರಮುಖ ಹಾಗೂ ಲಾಭದಾಯಕ ಬೆಳೆಯಾಗಿದೆ.

ಹೀಗಾಗಿ ಮುಂಗಾರಿಯಲ್ಲಿ ಬೆಳೆಯಲು ಸೂಕ್ತವಾದ ಬೆಳೆಯಾಗಿದೆ. ಈಗ ಅಂತಹ ಹೆಸರು ಬೆಳೆಗೆ ರಸ ಹೀರುವ ಕೀಟಗಳ ಭಾದೆ ಕಾಡುತ್ತಿದೆ. ಇದೊಂದು ವೈರಸ್ ಆಗಿದ್ದು, ಒಂದರಿಂದ ಒಂದ ಹೊಲಕ್ಕೆ ಹರುಡುತ್ತದೆ, ಮೊದಲೇ ರೈತರು ಸಾಲ ಶೂಲ ಮಾಡಿ ಬೀಜ ಗೊಬ್ಬರಗಳನ್ನು ತಂದು ಬೆಳೆದಿರುತ್ತಾರೆ ಅಂತಹುದರಲ್ಲಿ ಈ ರೀತಿ ರೋಗದಿಂದ ರೈತರಿಗೆ ಈ ಬೆಳೆ ಕೈ ಕೊಡುತ್ತದೆಯೇನೋ ಎಂದು ಆತಂಕ ಕಾಡುತ್ತಿದೆ

ತಾಲೂಕಿನಲ್ಲಿ ಒಟ್ಟು 5100 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಿದ್ದು, ಆದರೆ 2005 ಹೆಕ್ಟೇರ್ ಪ್ರದೇಶ ಅಷ್ಟೇ ಬಿತ್ತನೆ ಆಗಿದ್ದು,ಇದಕ್ಕೆ



ಪ್ರಮುಖ ಕಾರಣ ಮುಂಗಾರು ಮಳೆ ಕೈ ಕೊಟ್ಟದ್ದಾಗಿದೆ. ಸದ್ಯ ಈಗಿರುವ ಹೆಸರು 20 ರಿಂದ 25 ದಿನದ ಬೆಳೆಯಲ್ಲಿ ರಸ ಹೀರುವ ಕೀಟಗಳ ಭಾದೆ ಕಾಡುತ್ತಿದ್ದು, ಬೆಳೆಯ ಬೆಳವಣಿಗೆ ಕುಂಠಿತಗೊಳ್ಳುತ್ತಿದೆ, ಸಮಯಕ್ಕೆ ತಕ್ಕಹಾಗೆ ಬೆಳೆಯ ಅನುಗುಣವಾಗಿ ರೋಗ ಹತೋಟಿಗೆ ಕ್ರಮ ಕೈಗೊಳ್ಳಬೇಕು, ಇದನ್ನು ಹತೋಟಿಗೆ ತರಲು ಆಗದಿದ್ದರೆ ಮುಂಬರುವ ದಿನಗಳಲ್ಲಿ ಹಳದಿ ನಂಜಾಣು ರೋಗ ಕಾಡುತ್ತದೆ ಎಂದು ಕೃಷಿ ತಜ್ಞರು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ,

**ಸದ್ಯ ಹೆಸರು ಬೆಳೆಗೆ ರಸ ಹೀರುವ ಕೀಟಗಳು ಭಾದಿಸುತ್ತಿರುವ ಜಮೀನುಗಳಿಗೆ ಭೇಟಿ ನೀಡುತ್ತಿದ್ದೇವೆ, ಅಂತಹ ಲಕ್ಷಣಗಳು ಕಂಡು ಬಂದರೆ ಥಯಾಮೆಥಾಕ್ಸಾಮ್ ಕೆಮಿಕಲ್ಸ್ 6ಎಂಎಲ್ ಗೆ 15 ಲೀಟರ್ ನೀರು ಬೆರಸಿ ಸಿಂಪಡಣೆ, ಅಥವಾ ಅಸಿಟಾಮಪ್ರೈಡ 6 ರಿಂದ 8 ಮಿಲಿ ಗ್ರಾಂ 15 ಲೀಟರ ನೀರಿಗೆ ಬೆರಸಿ ಸಿಂಪಡಣೆ ಮಾಡಬೇಕು**

**ಶಿವಕುಮಾರ ಕಾಶಪ್ಪನವರ**
**ಸಹಾಯಕ ಕೃಷಿ ನಿರ್ದೇಶಕ ಶಿರಹಟ್ಟಿ,**

**ಪ್ರತಿಯೊಂದು ಬೆಳೆಯ ಬಗ್ಗೆ ರೈತರು ಕೃಷಿ ಸಂಬಂಧ ಪಟ್ಟ ಇಲಾಖೆಯ ಅಧಿಕಾ-ರಿಗಳನ್ನು ವಿಜ್ಞಾನಿಗಳನ್ನ ಭೇಟಿ ಮಾಡಿ ಅವರು ಕೊಟ್ಟ ಸಲಹೆಗಳನ್ನು ಅನುಸ-ರಿಸಬೇಕು ಇಲಾಖೆಯ ಜೊತೆಗೆ ರೈತರು ನಿರಂತರ ಸಂಪರ್ಕ ಇರಬೇಕು ರೋಗ ಹತೋಟಿಗೆ ಇಲಾಖೆಯ ಸೂಚನೆಗಳನ್ನ ಪಾಲಿಸಬೇಕು ಅಧಿಕಾ-ರಿಗಳು ರೈತರ ಜಮೀನುಗಳಿಗೆ ಭೇಟಿ ಕೊಡಬೇಕು ಯಾವುದೇ ಬಿತ್ತಿದ ಬೆಳೆಗಳನ್ನು ರೈತರು ಕಡ್ಡಾಯವಾಗಿ ಜಿ ಪಿ ಎಸ್ ಮಾಡಿಕೊಳ್ಳಬೇಕು, ಅಂದರೆ ಅತಿವೃಷ್ಟಿ ಅನಾವೃಷ್ಟಿ ಮತ್ತು ಬೆಳೆವಿಮಾ ಮತ್ತು ಸರಕಾರದ ಬೆಂಬಲ ಬೆಲೆ ಮಾರಾಟ ಮಾಡಲು ಉಪಯೋಗವಾಗುತ್ತದೆ,ಬೆಳೆ ಪರಿಹಾರ ಪಡೆಯಲು ಅನುಕೂಲವಾಗುತ್ತದೆ**

**ಚನ್ನಪ್ಪ ಷಣ್ಮುಖಿ**
**ಕೃಷಿಕ ಸಮಾಜ (ನವದೆಹಲಿ)**
**ಲಕ್ಷ್ಮೇಶ್ವರ ತಾಲೂಕ ಅಧ್ಯಕ್ಷ**

# ಮನೆಗಳಿಂದ ಕಸ ಸಂಗ್ರಹಣೆಗೆ ಸ್ವಂತ ವಾಹನ ಖರೀದಿಸಲು ಮುಂದಾದ ಜಿಬಿಎ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಮತ್ತು ಸಾಗಾಣಿಕೆ ಕಾರ್ಯವನ್ನು ಗುತ್ತಿಗೆದಾರರ ಅವಲಂಬನೆಯಿಂದ ಹೊರತಂದು, ಬಿಎಸ್‌ಡಬ್ಲ್ಯೂಎಂಎಲ್ ಹಾಗೂ ನಗರ ಪಾಲಿಕೆಗಳ ಸ್ವಂತ ವಾಹನಗಳ ಮೂಲಕ ನಿರ್ವಹಿಸುವ ಮಹತ್ವದ ಪ್ರಸ್ತಾವನೆ ಸರ್ಕಾರದ ಮುಂದಿಡಲಾಗಿದೆ.

ಪ್ರಸ್ತುತ ಸುಮಾರು 1.20 ಕೋಟಿ ಜನಸಂಖ್ಯೆ ಹೊಂದಿರುವ ಬೆಂಗಳೂರು ಮಹಾನಗರದಲ್ಲಿ 30 ಲಕ್ಷಕ್ಕೂ ಹೆಚ್ಚು ಮನೆಗಳಿದ್ದು, 750 ಮನೆಗಳಿಗೆ ಒಂದು ಬ್ಲಾಕ್ ಎಂಬ ಮಾನದಂಡದಂತೆ ಸುಮಾರು 4,000 ವಾಹನಗಳ ಅಗತ್ಯವಿದೆ. ಆದ-'ರೆ ಈಗಾಗಲೇ 4,900 ಆಟೋ ಟಿಪ್ಪರ್‌ಗಳು ಕಾರ್ಯನಿರ್ವಹಿಸುತ್ತಿದ್ದರೂ ಅವುಗಳಲ್ಲಿ ಶೇ.50ಕ್ಕೂ ಹೆಚ್ಚು ವಾಹನಗಳು 15 ವರ್ಷಗಳಿಗಿಂತ ಹಳೆಯದಾಗಿವೆ. ಹಳೆಯ ವಾಹನಗಳಿಂದ ನಿಯಮ ಪಾಲನೆ ಅಸಾಧ್ಯವಾಗಿರುವುದರಿಂದ ಪ್ರಸ್ತುತ ಬಳಕೆಯಲ್ಲಿರುವ ಮೂರು ಚಕ್ರದ ಆಟೋ ಟಿಪ್ಪರ್‌ಗಳಲ್ಲಿ ಗರಿಷ್ಠ 500 ಕೆಜಿ ತ್ಯಾಜ್ಯ ಸಾಗಿಸುವ ಸಾಮರ್ಥ್ಯ ಮಾತ್ರವಿದ್ದು, ಘನತ್ಯಾಜ್ಯ ನಿಯಮಾವಳಿ-2026ರ ಪ್ರಕಾರ ಒಣ-ಕಸ, ಹಸಿಕಸ, ಸ್ಯಾನಿಟರಿ ಕಸ ಮತ್ತು ವಿಶೇಷ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸುವುದು ಕಷ್ಟವಾಗಿದೆ.ಇದಲ್ಲದೆ ಬಹುತೇಕ ವಾಹನಗಳಲ್ಲಿ ಜಿಪಿಎಸ್ ವ್ಯವಸ್ಥೆಯೇ ಇಲ್ಲದ ಕಾರಣ ಅವುಗಳ ಚಲನ-ವಲನದ ಮೇಲ್ವಿಚಾರಣೆ ಸಾಧ್ಯವಾಗುತ್ತಿಲ್ಲ.

ಕಳೆದ 2006ರಿಂದ ಇಲ್ಲಿಯವರೆಗೆ ಕಸ ಸಂಗ್ರಹಣೆ ಮತ್ತು ಸಾಗಾಣಿಕೆ ಟೆಂಡರ್‌ಗಳು ಹಲವು ಬಾರಿ ನ್ಯಾಯಾಲಯಗಳಲ್ಲಿ ಪ್ರಶ್ನೆಗೆ ಒಳಗಾಗಿ, ಬಹುತೇಕ ಸಂದರ್ಭಗಳಲ್ಲಿ ಪ್ರಕ್ರಿಯೆಗಳು ವಿಳಂಬಗೊಂಡಿವೆ.2012ರಲ್ಲಿ 91 ಪ್ಯಾಕೇಜ್‌ಗಳಿಗೆ ಟೆಂಡರ್ ಕರೆಯಲಾಗಿದ್ದಾಗ ಬಿವಿಜಿ ಕಂಪನಿ 50 ಪ್ಯಾಕೇಜ್‌ಗಳಿಗೆ ಅರ್ಹತೆ ಪಡೆದಿತ್ತು. ಆದರೆ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ಹಿನ್ನೆಲೆಯಲ್ಲಿ ಉಚ್ಚ ನ್ಯಾಯಾಲಯ ಕಂಪನಿಯನ್ನು 30 ಪ್ಯಾಕೇಜ್‌ಗಳಿಗೆ ಸೀಮಿತಗೊಳಿಸಿತ್ತು. ಬಳಿಕ ಕಂಪನಿ ಕೇವಲ ನಾಲ್ಕು ಪ್ಯಾಕೇಜ್‌ಗಳಲ್ಲಿ ಮಾತ್ರ ಕೆಲಸ ಆರಂಭಿಸಿದ್ದರಿಂದ ಕಪ್ಪುಪಟ್ಟಿಗೆ ಸೇರಿಸಲಾಗಿತ್ತು.

**ಲೋಕಾಯುಕ್ತರ ತೀವ್ರ ಅಸಮಾಧಾನ:**

ಜೂನ್ 8ರಂದು ಲೋಕಾಯುಕ್ತರು ಕೆಲವು ವಾರ್ಡ್‌ಗಳಿಗೆ ಭೇಟಿ ನೀಡಿ ಕಸ ನಿರ್ವಹಣೆ ಸಮರ್ಪಕವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದರು. ಬಳಿಕ ಜೂನ್ 10ರಂದು ನಡೆದ ಸಭೆಯಲ್ಲಿ ಎಲ್ಲಾ ಐದು ನಗರ ಪಾಲಿಕೆಗಳ ಅಧಿಕಾರಿಗಳನ್ನು ವಿಚಾರಣೆ ನಡೆಸಿದ ಲೋಕಾಯುಕ್ತರು, ಗುತ್ತಿಗೆದಾರರ ಮೇಲಿನ ಸಂಪೂರ್ಣ ಅವಲಂಬನೆ ಕಡಿಮೆ ಮಾಡಿ ಕನಿಷ್ಠ ಶೇ.50ರಷ್ಟು ಸ್ವಂತ ವಾಹನಗಳನ್ನು ನಿಯೋಜಿಸುವಂತೆ ಸೂಚನೆ ನೀಡಿದ್ದರು.

ಈ ಕುರಿತು ಅನುಪಾಲನಾ ವರದಿ



ಸಲ್ಲಿಸಲು ಜುಲೈ 28ರವರೆಗೆ ಗಡುವು ನೀಡಲಾಗಿದೆ. ಮೊದಲ ಹಂತದಲ್ಲಿ 40 ಇ-ವಾಹನ ಖರೀದಿ: ಈ ಹಿನ್ನೆಲೆಯಲ್ಲಿ ಮೊದಲ ಹಂತವಾಗಿ 40 ಎಲೆಕ್ಟ್ರಿಕ್ ವಾಹನಗಳನ್ನು ಖರೀದಿಸಲು ಸುಮಾರು 4.97 ಕೋಟಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಜೆಮ್ ಪೋರ್ಟಲ್ ಮೂಲಕ ನೇರ ಖರೀದಿ ನಡೆಸಲು ಸಹ ಅನುಮತಿ ದೊರೆತಿದೆ.ಪ್ರತಿ ಇ-ವಾಹನದ ಬೆಲೆ 9.46 ಲಕ್ಷದಿಂದ 11.16 ಲಕ್ಷದವರೆಗೆ ಇರಲಿದ್ದು, ವಾಹನಗಳಲ್ಲಿ ಜಿಪಿ-ಎಸ್, ಡ್ಯಾಶ್ ಕ್ಯಾಮ್ ಸೇರಿದಂತೆ ಆಧುನಿಕ ತಂತ್ರಜ್ಞಾನ ಅಳವಡಿಸಲಾಗುತ್ತದೆ. 4,781

**ಸ್ವಯಂ ಉದ್ಯೋಗಿಗಳಿಗೆ ಅವಕಾಶ;**

ವಿಶೇಷವಾಗಿ ಗುತ್ತಿಗೆದಾರರ ಬದಲಿಗೆ ವಾಹನ ಚಾಲಕರು ಮತ್ತು ಸಹಾಯಕರಿಗೆ ನೇರ ಜವಾಬ್ದಾರಿ ನೀಡುವ ಹೊಸ ಮಾದ-ರಿಯನ್ನು ಪ್ರಸ್ತಾಪಿಸಲಾಗಿದೆ.ಪ್ರತಿ ವಾಹನಕ್ಕೆ ಕನಿಷ್ಠ 2 ಲಕ್ಷ ಮುಂಗಡ ಠೇವಣಿ ಪಡೆದು ವಾಹನ ಹಂಚಿಕೆ ಮಾಡುವುದು, ಉಳಿದ ಮೊತ್ತವನ್ನು ಬ್ಯಾಂಕ್ ಸಾಲದ ಮೂಲಕ ಪಾವತಿಸಿ ಮಾಸಿಕ ಬಿಲ್ಲಿನಿಂದ ಇಎಂಐ ಕಡಿತಗೊಳಿಸುವ ಯೋಜನೆ ರೂಪಿಸಲಾಗಿದೆ. ಏಳು ವರ್ಷಗಳ ಬಳಿಕ ವಾಹನದ ಮಾಲೀಕತ್ವವನ್ನು ಚಾಲಕರಿಗೆ ವರ್ಗಾಯಿಸುವ ವ್ಯವಸ್ಥೆಯೂ ಪ್ರಸ್ತಾಪದಲ್ಲಿದೆ.ಈ ಯೋಜನೆ ಜಾರಿಯಾದರೆ ಸುಮಾರು 4,781 ಸ್ವಯಂ ಉದ್ಯೋಗಿಗಳು ಸೃಷ್ಟಿಯಾಗಲಿದ್ದು, ಸಮಾಜದ ಕೆಳವರ್ಗದ ಚಾಲಕರು ಮತ್ತು ಸಹಾಯಕರ ಆರ್ಥಿಕ ಸಬಲೀಕರಣಕ್ಕೆ ನೆರವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

**ಗುತ್ತಿಗೆದಾರರ ಏಕಸ್ವಾಮ್ಯಕ್ಕೆ ಅಂತ್ಯ?**


ಪ್ರಸ್ತುತ ಬೆಂಗಳೂರಿನಲ್ಲಿ ಕಸ ಸಂಗ್ರಹಣೆ ಮತ್ತು ಸಾಗಾಣಿಕೆ ಕಾರ್ಯ ಕೆಲವೇ ಗುತ್ತಿಗೆದಾರರ ನಿಯಂತ್ರಣದಲ್ಲಿ ಇರುವುದ-ರಿಂದ ಪದೇ ಪದೇ ಸೇವೆಯಲ್ಲಿ ವ್ಯತ್ಯಯ ಉಂಟಾಗುತ್ತಿದೆ. ಪ್ರತಿದಿನ ಶೇ.5ರಿಂದ 10ರಷ್ಟು ವಾಹನಗಳು ಗೈರಾಗುತ್ತಿರುವ ಪರಿಣಾಮ ಹಲವಾರು ವಾರ್ಡ್‌ಗಳಲ್ಲಿ ಕಪ್ಪುಚುಕ್ಕೆಗಳು ನಿರ್ಮಾಣವಾಗುತ್ತಿವೆ. ಹೀಗಾಗಿ ಮೈಸೂರು ಹಾಗೂ ಇಂಡೋರ್ ನಗರಗಳ ಮಾದರಿಯಲ್ಲಿ ಸ್ವಂತ ವಾಹನ ವ್ಯವಸ್ಥೆ ಜಾರಿಗೊಳಿಸುವ ಮೂಲಕ ಘನತ್ಯಾಜ್ಯ ನಿರ್ವಹಣೆಯಲ್ಲಿ ಮಹತ್ವದ ಬದಲಾವಣೆ ತರಲು ಬಿಎಸ್‌ಡಬ್ಲ್ಯೂಎಂಎಲ್ ಮುಂದಾಗಿದೆ. ಸ್ವಂತ ವಾಹನ ಮಾದರಿಗೆ ಸರ್ಕಾರ ಅಂತಿಮ ಒಪ್ಪಿಗೆ ನೀಡಿದರೆ, ಬೆಂಗಳೂರಿನ ಘನತ್ಯಾಜ್ಯ ನಿರ್ವಹಣೆಯಲ್ಲಿ ಇದು ಅತಿದೊಡ್ಡ ನೀತಿ ಬದಲಾವಣೆಯಾಗುವ ಸಾಧ್ಯತೆ ಇದೆ.

# ವೈದ್ಯಕೀಯ, ದಂತ ವೈದ್ಯಕೀಯ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕ ಹೆಚ್ಚಳ ಇಲ್ಲ

ಬೆಂಗಳೂರು, ಜೂ.12- ಪ್ರಸಕ್ತ ಶೈಕ್ಷಣಿಕ ವರ್ಷದಿಂದ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕವನ್ನು ಹೆಚ್ಚಳ ಮಾಡದೇ ಯಥಾಸ್ಥಿತಿಯನ್ನೇ ಮುಂದುವರೆಸುವ ಮಹತ್ವ ತೀರ್ಮಾನವನ್ನು ರಾಜ್ಯಸರ್ಕಾರ ತೆಗೆದುಕೊಂಡಿದೆ.

ಸರ್ಕಾರದ ಇಂತಹ ನಿರ್ಧಾರದಿಂದಾಗಿ ಈ ಬಾರಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶುಲ್ಕ ಹಚ್ಚಳವಾಗುತ್ತದೆ ಎಂಬ ಆತಂಕದಲ್ಲಿದ್ದ ವಿದ್ಯಾರ್ಥಿಗಳು ಹಾಗೂ ಪೋಷಕರು ನೆಮದಿಯ ನಿಟ್ಟುಸಿರು ಬಿಡುವಂತಾಗಿದೆ.

ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯವರೊಂದಿಗೆ ನಡೆದ ಸಭೆಯಲ್ಲಿ ಈ ಮಹತ್ವದ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ. ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲರು, ಖಾಸಗಿ ಕಾಲೇಜು ಆಡಳಿತ ಮಂಡಳಿಗಳ ಶುಲ್ಕವನ್ನು



ಹೆಚ್ಚಳ ಮಾಡಬೇಕೆಂಬ ಪ್ರಸ್ತಾವನೆಯನ್ನು ನಾವು ಒಪ್ಪಿಕೊಂಡಿಲ್ಲ. ಈ ಹಿಂದೆ ಅಂದರೆ 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿದ್ದ ಶುಲ್ಕವು ಯಥಾಸ್ಥಿತಿಯಲ್ಲೇ ಮುಂದುವರೆಯಲಿದೆ ಎಂದು ಸ್ಪಷ್ಟಪಡಿಸಿದರು.

ಪೋಷಕರು ಮತ್ತು ವಿದ್ಯಾರ್ಥಿಗಳು ಶುಲ್ಕ ಹೆಚ್ಚಳವಾಗುತ್ತದೆ ಎಂಬ ಆತಂಕಕ್ಕೆ ಒಳಗಾಗಬಾರದು. ಈಗಾಗಲೇ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಾತಿಗೆ ನಡೆದಿದ್ದ ನೀಟ್ ಪ್ರವೇಶ ಪರೀಕ್ಷೆ ರದ್ದಾಗಿ ಮರುಪ-ರೀಕ್ಷೆ ನಡೆಯಬೇಕಿರುವುದರಿಂದ ಒತ್ತಡಕ್ಕೆ ಒಳಗಾಗಿದ್ದಾರೆ. ಇಂತಹ ಸಮಯದಲ್ಲಿ ಶುಲ್ಕ ಹೆಚ್ಚಳ ಮಾಡುವುದು ಸರಿಯಲ್ಲ ಎಂಬ ತೀರ್ಮಾನ ಮಾಡಲಾಗಿದೆ. ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜು ಮಂಡಳಿಯವರು ಶುಲ್ಕ ಹೆಚ್ಚಳ ಮಾಡುವ ಪ್ರಸ್ತಾವನೆಗೆ ನಾವು ಅವಕಾಶವನ್ನೇ ಕೊಟ್ಟಿಲ್ಲ. ಹೀಗಾಗಿ ವಿದ್ಯಾರ್ಥಿಗಳು ಮತ್ತು ಪೋಷಕರು ಯಾವುದೇ ರೀತಿಯ ಊಹಾಪೋಹಕ್ಕೆ ಕಿವಿಗೊಡಬಾರದು ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಮನವಿ ಮಾಡಿದರು.

**ಶುಲ್ಕ ಸ್ಥಿರತೆ:**

ಕಳೆದ ಸಾಲಿನಲ್ಲಿ ನಿಗದಿಪಡಿಸಿದ್ದ ಶುಲ್ಕವನ್ನೇ ಈ ಸಾಲಿನಲ್ಲೂ ಮುಂದುವ-ರಿಸಲಾಗುವುದು. ಈ ನಿಯಮವು ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳೆರಡಕ್ಕೂ ಅನ್ವಯಿಸುತ್ತದೆ. ಈ ನಿರ್ಧಾರದಿಂದಾಗಿ ಪ್ರವೇಶ ಪಡೆಯಲಿರುವ ವಿದ್ಯಾರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿದಂತಾಗಿದೆ.

**ಶುಲ್ಕ ವಿವರ :**

ಎಂಬಿಬಿಎಸ್ : ಸರ್ಕಾರಿ ಕಾಲೇಜು ? 55,000 ರೂ. ಕೆಪಿಸಿಎಫ್ ಸರ್ಕಾರಿ ಕೋಟ ? 1,41,621 ರೂ. ಕೆಆರ್‌ಎಲ್‌ಎಂಪಿಸಿಎ ಸರ್ಕಾರಿ ಕೋಟ ? 1,41,621 ರೂ. ಎಎಂಪಿಸಿಕೆ ಸರ್ಕಾರಿ ಕೋಟ ? 1,41,621 ರೂ. ಖಾಸಗಿ ವಿಶ್ವವಿದ್ಯಾನಿಲಯಗಳ ಸರ್ಕಾರಿ ಕೋಟ ? 1,41,621 ರೂ. ಕೆಪಿಸಿಎಫ್ ಖಾಸಗಿ ಕೋಟ ? 11,88,167 ರೂ. ಕೆಆರ್-ಎಲ್‌ಎಂಪಿಸಿಎ ಖಾಸಗಿ ಕೋಟ ? 11,88,167 ರೂ. ಎಎಂಪಿಸಿಕೆ ಖಾಸಗಿ ಕೋಟ ? 11,88,167 ರೂ. ದಂತ ವೈದ್ಯಕೀಯ : ಸರ್ಕಾರಿ ಕಾಲೇಜುಗಳ ಕೋಟ ? 40,000 ರೂ. ಕೆಪಿಸಿಎಫ್ ಸರ್ಕಾರಿ ಕೋಟ ? 83,358 ರೂ. ಕೆಆರ್‌ಎಲ್‌ಎಂಪಿಸಿಎ ಸರ್ಕಾರಿ ಕೋಟ ? 83,358 ರೂ. ಎಎಂಪಿಸಿಕೆ ಸರ್ಕಾರಿ ಕೋಟ ? 83,358 ರೂ. ಖಾಸಗಿ ಕೋಟ : ಕೆಪಿಸಿಎಫ್ ಖಾಸಗಿ ಕೋಟ ? 7,32,625 ರೂ. ಕೆಆರ್‌ಎಲ್‌ಎಂಪಿಸಿಎ ಖಾಸಗಿ ಕೋಟ ? 7,32,625 ರೂ. ಎಎಂಪಿಸಿಕೆ ಖಾಸಗಿ ಕೋಟ ? 7,32,625 ರೂ. ಸಭೆಯಲ್ಲಿ ಕಲಬುರಗಿ ಸಂಸದ ರಾಧಾಕೃಷ್ಣ, ದಂತ ವೈದ್ಯಕೀಯ ಕಾಲೇಜುಗಳ ಪರವಾಗಿ ವಿಧಾನಪರಿಷತ್ ಸದಸ್ಯ ನಾಗರಾಜ್ ಯಾದವ್, ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮದ್ ಮೋಸಿನ್, ಎಂ.ಎಸ್.ರಾಮಯ್ಯ ಕಾಲೇಜಿನ ಜಯರಾಂ ಹಾಗೂ ವಿವಿಧ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರು ಭಾಗವಹಿಸಿದ್ದರು.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes2026@gmail.com